# ಹಿಬ್ರಿಯರಿಗೆ ಬರೆದ ಪತ್ರ

## ಮುನ್ನುಡಿ

ಈ ಲೇಖನ ಪ್ರಾರಂಭದಲ್ಲಿ ಪತ್ರದಂತಿಲ್ಲವಾದರೂ ಅಂತ್ಯದಲ್ಲಿ ಪತ್ರದ ರೂಪವನ್ನೇ ತಾಳುತ್ತದೆ. ಅಂದು ಹೆಚ್ಚುಹೆಚ್ಚಿನ ಅಡ್ಡಿ ಆತಂಕಗಳಿಗೆ ಒಳಗಾಗಿ ಕಂಗೆಟ್ಟಿದ್ದ ಕ್ರೈಸ್ತವಿಶ್ವಾಸಿಗಳು ಯೆಹೂದ್ಯ ಧರ್ಮಕ್ಕೆ ಹಿಂದಿರುಗುವ ಅಪಾಯವಿತ್ತು. ಅಂಥವರನ್ನೇ ಉದ್ದೇಶಿಸಿ ಬರೆದ ಪತ್ರ ಇದು. ಯೇಸುಕ್ರಿಸ್ತರೇ ಸತ್ಯವಾದ ಹಾಗೂ ಅಂತಿಮ ಹಾಗು ಸಂಪೂರ್ಣವಾದ ದೈವಶೃತಿ. ಆದ್ದರಿಂದ ಅವರಲ್ಲಿ ವಿಶ್ವಾಸವಿಟ್ಟವರು ಅಚಲರಾಗಿರಬೇಕೆಂದು ಲೇಖಕನು ಒತ್ತಿಹೇಳುತ್ತಾನೆ. ಮೂರು ತತ್ವಗಳನ್ನು ಈ ಪತ್ರದಲ್ಲಿ ಎತ್ತಿ ಹಿಡಿಯಲಾಗಿದೆ: 1. ಯೇಸುಸ್ವಾಮಿ ದೇವಪಿತನ ನಿತ್ಯಪುತ್ರ, ದೇವಪಿತನಿಗೆ ವಿಧೇಯನಾಗಿ ಸಾವು ನೋವನ್ನು ಅನುಭವಿಸಿದಾತ. ದೇವರ ಏಕೈಕ ಪುತ್ರನಾಗಿದ್ದುದರಿಂದ ಯೇಸು ಹಳೆಯ ಒಡಂಬಡಿಕೆಯ ಎಲ್ಲಾ ಪ್ರವಾದಿಗಳಿಗೂ ದೇವದೂತರಿಗೂ ಮೋಶೆಗೂ ಮಿಗಿಲಾದ ವ್ಯಕ್ತಿ. 2. ಹಳೆಯ ಒಡಂಬಡಿಕೆಯ ಯಾಜಕರೆಲ್ಲರಿಗಿಂತಲೂ ಯೇಸುಸ್ವಾಮಿ ಎಷ್ಟೋ ಶ್ರೇಷ್ಠ ಯಾಜಕರು ಹಾಗೂ ಚಿರಂತಗುರು ಎಂದು ದೇವರೇ ಸ್ಪಷ್ಟಪಡಿಸಿದ್ದಾರೆ. 3. ಯೇಸುವಿನಲ್ಲಿ ವಿಶ್ವಾಸವಿಡುವವನು ಪಾಪ, ಪರಿತಾಪ ಮತ್ತು ಮೃತ್ಯುವಿನಿಂದ ವಿಮುಕ್ತನಾಗುತ್ತಾನೆ. ಶ್ರೇಷ್ಠ ಹಾಗೂ ಪ್ರಧಾನಯಾಜಕರಾದ ಯೇಸು ನಿಜವಾದ ಜೀವೋದ್ಧಾರಕ. ಯೆಹೂದ್ಯ ಧರ್ಮದ ವಿಧಿನಿಯಮಗಳೂ ಪ್ರಾಣಿಬಲಿಯರ್ಪಣೆಗಳೂ ಕೇವಲ ಸನ್ನೆಸಂಕೇತಗಳು ಮಾತ್ರ.

ಇಸ್ರಯೇಲಿನ ಐತಿಹಾಸಿಕ ಗಣ್ಯವ್ಯಕ್ತಿಗಳ ಆದರ್ಶವನ್ನು ನಿರೂಪಿಸಿ, ಓದುಗರು ತಮ್ಮ ವಿಶ್ವಾಸದಲ್ಲಿ ದೃಢವಾಗಿರುವಂತೆ (ಅಧ್ಯಾಯ 11) ಯೇಸುಸ್ವಾಮಿಯನ್ನೇ ಗುರಿಯಾಗಿಟ್ಟುಕೊಂಡು ಕೊನೆಯವರೆಗೂ ಸದೃಢರಾಗಿ ಬಾಳುವಂತೆ (ಅಧ್ಯಾಯ 12) ಲೇಖಕ ಉಪದೇಶಿಸುತ್ತಾನೆ. ತಮಗೆ ಬಂದೊದಗಬಹುದಾದ ಕಷ್ಟಸಂಕಟಗಳನ್ನೂ ಬಾಧೆಗಳನ್ನೂ ಸಹಿಸಿಕೊಳ್ಳಬೇಕೆಂದು ಪ್ರೋತ್ಸಾಹಿಸುತ್ತಾನೆ.

### ಪರಿವಿಡಿ


| | | |
|---|---|---|
| ಕ್ರಿಸ್ತೇಸುವೇ ದೇವರ ಸಂಪೂರ್ಣ ಪ್ರಕಟನೆ | – | 1.1 – 1.3 |
| ಕ್ರಿಸ್ತೇಸು ದೇವದೂತರಿಗಿಂತಲೂ ಶ್ರೇಷ್ಠರು | – | 1.4 – 2.18 |
| ಕ್ರಿಸ್ತೇಸು ಮೋಶೆ ಹಾಗೂ ಯೆಹೋಶುವನಿಗಿಂತಲೂ ಶ್ರೇಷ್ಠರು | – | 3.1 – 4.13 |
| ಕ್ರಿಸ್ತೇಸುವಿನ ಯಾಜಕತ್ವದ ಶ್ರೇಷ್ಠತೆ | – | 4.14 – 7.28 |
| ಕ್ರಿಸ್ತೇಸುವಿನ ಒಡಂಬಡಿಕೆಯ ಶ್ರೇಷ್ಠತೆ | – | 8.1 – 9.28 |
| ಕ್ರಿಸ್ತೇಸುವಿನ ಬಲಿಯರ್ಪಣೆಯ ಶ್ರೇಷ್ಠತೆ | – | 10.1 – 10.39 |
| ಕ್ರೈಸ್ತವಿಶ್ವಾಸ ನಮ್ಮ ಬಾಳ್ವೆಗೆ ಪ್ರಧಾನ ಆಧಾರ | – | 11.1 – 12.29 |
| ಅಂತಿಮ ಬುದ್ಧಿವಾದ, ಆಶೀರ್ವಚನ | – | 13.1 – 13.25 |


### ಪುತ್ರನ ಮುಖೇನ ಪಿತನ ಸಂದೇಶ

**1** ಪೂರ್ವಕಾಲದಲ್ಲಿ ದೇವರು ನಮ್ಮ ಪಿತೃಗಳೊಡನೆ ಹಲವಾರು ವಿಧದಲ್ಲಿ, ಅನೇಕ ಸಾರಿ ಪ್ರವಾದಿಗಳ
ಮುಖಾಂತರ ಮಾತನಾಡಿದರು. 2ಆದರೆ, ಇತ್ತೀಚಿನ ಅಂತಿಮ ದಿನಗಳಲ್ಲಿ ಅವರು ತಮ್ಮ ಪುತ್ರನ ಮುಖೇನ
ನಮ್ಮೊಡನೆ ಮಾತನಾಡಿದ್ದಾರೆ. ದೇವರು ಇಡೀ ವಿಶ್ವವನ್ನು ಉಂಟುಮಾಡಿದ್ದು ಇವರ ಮುಖಾಂತರವೇ;
ಸಮಸ್ತಕ್ಕೂ ಬಾಧ್ಯನನ್ನಾಗಿ ನೇಮಿಸಿರುವುದು ಇವರನ್ನೇ. 3ಇವರೇ ದೇವರ ಮಹಿಮೆಯ ತೇಜಸ್ಸು; ಇವರೇ
ದೈವತ್ವದ ಪಡಿಯಚ್ಚು; ತಮ್ಮ ಶಕ್ತಿಯುತ ವಾಕ್ಯದಿಂದ ಇವರೇ ಸಮಸ್ತಕ್ಕೂ ಆಧಾರ; ನಮ್ಮ ಪಾಪಗಳನ್ನು
ತೊಡೆದು ಹಾಕಿ, ಸ್ವರ್ಗದಲ್ಲಿ ಮಹೋನ್ನತ ದೇವರ ಬಲಪಾರ್ಶ್ವದಲ್ಲಿ ಆಸೀನರಾಗಿರುವವರೂ ಇವರೇ.

## ದೇವದೂತರಿಗಿಂತ ಪುತ್ರನೇ ಶ್ರೇಷ್ಠ

4 ಹೀಗೆ ದೇವರ ಪುತ್ರನು ದೇವದೂತರಿಗಿಂತಲೂ ಶ್ರೇಷ್ಠ; ಅವರಿಗಿಂತಲೂ ಹೆಸರು
ವಾಸಿಯಾದಾತ. 5 ಏಕೆಂದರೆ, ದೇವರು ತಮ್ಮ ದೂತರಲ್ಲಿ ಯಾರಿಗಾದರೂ –

"ನೀನೇ ನನ್ನ ಪುತ್ರ;
ನಾನೇ ನಿನ್ನನಿಂದು ಪಡೆದವ,"

ಎಂದು ಎಂದಾದರೂ ಹೇಳಿದ್ದುಂಟೇ? ಅಥವಾ,

"ನಾನಾತನಿಗೆ ಪಿತನು,
ಆತನೆನಗೆ ಪುತ್ರನು,"

ಎಂದಾಗಲಿ ಹೇಳಿದ್ದುಂಟೇ? 6 ಇದಲ್ಲದೆ ದೇವರು ತಮ್ಮ ಚೊಚ್ಚಲ ಮಗನನ್ನು ಭೂಲೋಕಕ್ಕೆ ಕಳುಹಿಸುವಾಗ:

"ದೇವದೂತರೆಲ್ಲರೂ ಆತನನ್ನು
ಆರಾಧಿಸಲಿ," ಎಂದಿದ್ದಾರೆ.

7 ದೇವದೂತರ ವಿಷಯದಲ್ಲಿ –

"ದೇವರು ತಮ್ಮ ದೂತರನ್ನು
ಬೀಸುಗಾಳಿಯನ್ನಾಗಿಯೂ
ತಮ್ಮ ಸೇವಕರನ್ನು
ಅಗ್ನಿಜ್ವಾಲೆಯನ್ನಾಗಿಯೂ
ಮಾಡುತ್ತಾರೆ,"

ಎಂದು ಹೇಳಿದ್ದಾರೆ. 8 ತಮ್ಮ ಪುತ್ರನನ್ನು ಕುರಿತಾದರೋ:

"ದೇವಾ, ನಿನ್ನ ಸಿಂಹಾಸನವು ಶಾಶ್ವತವಾದುದು;
ನ್ಯಾಯದಂಡವೇ ನಿನ್ನ ರಾಜದಂಡವಾಗಿದೆ.
9 ನ್ಯಾಯನೀತಿಗಳನ್ನು ನೀನು ಪ್ರೀತಿಸಿದೆ
ಅನ್ಯಾಯ, ಅಕ್ರಮಗಳನ್ನು ದ್ವೇಷಿಸಿದೆ.
ಆದ್ದರಿಂದ ದೇವರು, ಹೌದು ನಿನ್ನ ದೇವರು
ನಿನ್ನನ್ನು ನಿನ್ನ ಮಿತ್ರರಿಗಿಂತ ಮಿಗಿಲಾಗಿ
ಸನ್ಮಾನಿಸಿ
ಪರಮಾನಂದ ತೈಲದಿಂದ ಅಭಿಷೇಕಿಸಿದ್ದಾರೆ,"
ಎಂದು ಹೇಳಿದ್ದಾರೆ.

10 ಇದಲ್ಲದೆ,

"ಸರ್ವೇಶ್ವರಾ, ಆದಿಯಲ್ಲಿ ನೀ
ಭೂಮಿಯನು ಸೃಜಿಸಿದೆ
ನಭ ಮಂಡಲದಲ್ಲಿ ನಿನ್ನ ಕೈಚಳಕವ ತೋರಿದೆ.
11 ಇವುಗಳೆಲ್ಲವೂ ಅಳಿಯುತ್ತವೆ
ನೀನಾದರೋ ಸದಾ ಉಳಿಯುವೆ.
ಹಳತಾಗುವುವು ಇವೆಲ್ಲಾ ಬಟ್ಟೆಬರೆಯಂತೆ.
12 ಮುದುರಿ ಮೂಲೆಗೆಸೆಯುವೆ ಇವನ್ನು
ಮೇಲಂಗಿಯಂತೆ.
ಬದಲಾಯಿಸುವೆ ನೀ ಅವನ್ನು ಉಡುಪಿನಂತೆ
ನೀನಾದರೋ ಬದಲಾಗದೆ ಇರುವೆ
ಮೊದಲಿನಂತೆ.
ಮುಗಿವೇ ಇರದು ನಿನ್ನ ಬಾಳುವೆಗೆ,"

ಎಂದೂ ಸಹ ದೇವರು ನುಡಿದಿದ್ದಾರೆ. 13ಯಾವ ದೇವದೂತನಿಗಾದರೂ ದೇವರು,
"ನಿನ್ನ ಶತ್ರುಗಳನ್ನು ನಾನು ನಿನ್ನ
ಪಾದದಡಿ ಹಾಕುವತನಕ
ನನ್ನ ಬಡಗಡೆಯಲ್ಲಿ ಆಸೀನನಾಗಿರು,"
ಎಂದು ಎಂದಾದರೂ ಹೇಳಿದ್ದುಂಟೇ? 14ದೂತರೆಲ್ಲರೂ ಕೇವಲ ಸೇವೆಮಾಡುವ ಆತ್ಮಗಳಲ್ಲವೇ?
ಜೀವೋದ್ಧಾರವನ್ನು ಬಾಧ್ಯವಾಗಿ ಹೊಂದಬೇಕಾದವರ ಊಳಿಗಕ್ಕಾಗಿ ಕಳುಹಿಸಲಾದವರಲ್ಲವೇ?

## ಉತ್ಕೃಷ್ಟ ಜೀವೋದ್ಧಾರ

**2** ಆದ್ದರಿಂದಲೇ ಹುಚ್ಚುಹೊಳೆಯಲ್ಲಿ ಕೊಚ್ಚಿಹೋಗದ ಹಾಗೆ ನಾವು ಕೇಳಿರುವ ಸತ್ಯಗಳಿಗೆ ಬಿಗಿಯಾಗಿ
ಕಚ್ಚಿಕೊಳ್ಳಬೇಕು. 2ಏಕೆಂದರೆ, ದೇವದೂತರ ಮುಖಾಂತರ ನಮ್ಮ ಪೂರ್ವಜರಿಗೆ ಕೊಡಲಾದ ಸಂದೇಶವು
ಅಕ್ಷಯವಾಗಿದ್ದು ಅದನ್ನು ಮೀರಿ ಮಾಡಿದ ಪ್ರತಿಯೊಂದು ತಪ್ಪು ಮತ್ತು ಅವಿಧೇಯತೆಯು
ಶಿಕ್ಷಾರ್ಹವಾಗಿದ್ದರೆ, 3ಇಂಥ ಉತ್ಕೃಷ್ಟ ಜೀವೋದ್ಧಾರವನ್ನು ಪಡೆದಿರುವ ನಾವು ಅದನ್ನು ಅಲಕ್ಷ್ಯ ಮಾಡಿದಲ್ಲಿ
ಶಿಕ್ಷೆಯಿಂದ ಹೇಗೆತಾನೆ ತಪ್ಪಿಸಿಕೊಳ್ಳಬಲ್ಲೆವು? ಈ ಜೀವೋದ್ಧಾರವನ್ನು ಮೊತ್ತಮೊದಲು ಸಾರಿದವರು
ಪ್ರಭುವೇ. ಅವರನ್ನು ಆಗ ಆಲಿಸಿದವರು ಅದನ್ನು ನಮಗೆ ಪ್ರಮಾಣೀಕರಿಸಿದ್ದಾರೆ. 4ಸೂಚಕ
ಕಾರ್ಯಗಳಿಂದಲೂ ಅದ್ಭುತ ಕಾರ್ಯಗಳಿಂದಲೂ ಹಲವಾರು ಮಹತ್ಕಾರ್ಯಗಳಿಂದಲೂ ಮತ್ತು ತಮ್ಮ
ಚಿತ್ತಾನುಸಾರ ಅನುಗ್ರಹಿಸಿದ ಪವಿತ್ರಾತ್ಮ ಅವರ ವರದಾನಗಳಿಂದಲೂ ದೇವರು ಆ ಪ್ರಮಾಣವನ್ನು
ಪುಷ್ಟೀಕರಿಸಿದ್ದಾರೆ.

## ಉದ್ಧಾರ ಪ್ರವರ್ತಕ ಯೇಸು

5 ನಾವು ಪ್ರಸ್ತಾಪಿಸುತ್ತಿರುವ ನೂತನ ಸಾಮ್ರಾಜ್ಯವನ್ನು ದೇವರು ತಮ್ಮ ದೂತರಿಗೆ ಅಧೀನ
ಪಡಿಸಲಿಲ್ಲ. 6ಅದಕ್ಕೆ ಬದಲಾಗಿ, ಪವಿತ್ರ ಗ್ರಂಥದಲ್ಲಿ ಒಂದೆಡೆ ಹೀಗೆಂದು ಸ್ಪಷ್ಟವಾಗಿ ಹೇಳಲಾಗಿದೆ:
"ಓ ದೇವಾ,
ಹುಲುಮಾನವನೆಷ್ಟರವನು ನೀನವನ
ಗಮನಿಸಲು?
7 ನರಪುತ್ರನು ಎನಿತರವನು ನೀನವನ ಅರಸಿ
ಬರಲು?
ದೇವದೂತರಿಗಿಂತಲೂ ಆತನನು
ತುಸುವೇ ತಗ್ಗಿಸಿದೆ
ಘನಗೌರವವನು, ಸಿರಿಮಹಿಮೆಯನು
ಮುಕುಟವಾಗಿ ಮುಡಿಸಿದೆ;
8 ಆತನಿಗೆ ನೀನೆಲ್ಲವನು ಅಧೀನವಾಗಿಸಿದೆ." ಹೀಗೆ ದೇವರು ಎಲ್ಲವನ್ನು ಆತನಿಗೆ ಅಧೀನಪಡಿಸಿರುವುದರಿಂದ
ಆತನಿಗೆ ಅಧೀನವಲ್ಲದ್ದು ಏನೂ ಇಲ್ಲವೆಂದಾಯಿತು. ಆದರೂ ಸದ್ಯಕ್ಕೆ ಎಲ್ಲವೂ ಆತನಿಗೆ
ಅಧೀನವಾಗಿರುವುದನ್ನು ನಾನು ಕಾಣುತ್ತಿಲ್ಲ. 9ದೇವದೂತರಿಗಿಂತ ಕೊಂಚ ಕಾಲವೇ ತುಸು ತಗ್ಗಿಸಲಾದ
ಒಬ್ಬರನ್ನು, ಅಂದರೆ ಯೇಸುವನ್ನು ಮಾತ್ರ ನಾವು ಕಾಣುತ್ತೇವೆ. ಇವರು ಯಾತನಾ ಮರಣವನ್ನು
ಅನುಭವಿಸಿದ್ದರಿಂದ 'ಘನ ಗೌರವವನ್ನೂ ಸಿರಿ ಮಹಿಮೆಯನ್ನೂ ಮುಟುಕವಾಗಿ' ಪಡೆದುದನ್ನು ನಾವು
ಕಾಣುತ್ತೇವೆ. ದೈವಾನುಗ್ರಹದಿಂದ ಎಲ್ಲಾ ಮಾನವರ ಕಲ್ಯಾಣಕ್ಕಾಗಿ ಅವರು ಸಾವನ್ನು ಅನುಭವಿಸಬೇಕಾಗಿತ್ತು.
10ಸಮಸ್ತವನ್ನೂ ಸೃಷ್ಟಿಸಿ ಪರಿಪಾಲಿಸಿಕೊಂಡು ಬರುವ ದೇವರು ತಮ್ಮ ಮಹಿಮೆಯಲ್ಲಿ ಪಾಲುಗೊಳ್ಳಲು

ಮಕ್ಕಳನೇಕರನ್ನು ಕರೆತರುವಂತೆ ಉದ್ಧಾರ ಪ್ರವರ್ತಕರಾದ ಯೇಸುವನ್ನು ಹಿಂಸೆಬಾಧೆಗಳ ಮೂಲಕ ಪರಿಪೂರ್ಣವಾಗಿಸಿದ್ದು ಯುಕ್ತವೇ ಸರಿ.

11 ಪವಿತ್ರಗೊಳಿಸುವವನಿಗೂ ಪವಿತ್ರರಾಗುವವರಿಗೂ ಒಬ್ಬನೇ ತಂದೆ. ಈ ಕಾರಣ, ಪವಿತ್ರಗೊಳಿಸುವ ಯೇಸು, ಪವಿತ್ರರಾಗುವವರನ್ನು 'ಸಹೋದರರು' ಎಂದು ಕರೆಯಲು ನಾಚಿಕೆ ಪಡಲಿಲ್ಲ.

12 "ಸಾರುವೆನು ನನ್ನ ಸೋದರರಿಗೆ
ನಿನ್ನ ನಾಮದ ಮಹಿಮೆಯನು
ಮಾಡುವೆನು ಸಭಾಮಧ್ಯೆ ನಿನ್ನ
ಗುಣಗಾನವನು," ಎಂದೂ
13 "ದೇವರಲ್ಲಿ ಭರವಸೆಯಿಡುವೆನು
ನಾನು," ಎಂದೂ
"ಇಗೋ, ಇರುವೆವು ನಾನು ಮತ್ತು
ದೇವರೆನಗಿತ್ತ ಕುವರರು,"
ಎಂದೂ ಹೇಳಿದ್ದಾರೆ.

14-15ಇದಲ್ಲದೆ, ಮಕ್ಕಳು ರಕ್ತಮಾಂಸಧಾರಿಗಳಾಗಿರುವುದರಿಂದ ಯೇಸುವು ಅವರಂತೆ ರಕ್ತಮಾಂಸಧಾರಿಯಾದರು. ಹೀಗೆ ಮರಣಾಧಿಕಾರಿಯಾಗಿದ್ದ ಸೈತಾನನನ್ನು ತಮ್ಮ ಮರಣದಿಂದಲೇ ಸೋಲಿಸಲು ಮತ್ತು ಮರಣಭಯದ ನಿಮಿತ್ತ ತಮ್ಮ ಜೀವನದುದ್ದಕ್ಕೂ ದಾಸ್ಯದಲ್ಲಿದ್ದವರನ್ನು ಬಿಡುಗಡೆ ಮಾಡಲು ಅವರು ಮನುಷ್ಯರಾದರು.
16ಅವರು ಉದ್ಧಾರ ಮಾಡಬಂದುದು ಖಂಡಿತವಾಗಿ ದೇವದೂತರನ್ನಲ್ಲ, ಅಬ್ರಹಾಮನ ಸಂತತಿಯನ್ನು.
17ಆದಕಾರಣ, ಎಲ್ಲದರಲ್ಲೂ ತಮ್ಮ ಸಹೋದರರಿಗೆ ಸಮಾನರಾಗಬೇಕಾಗಿತ್ತು; ಜನರ ಪಾಪನಿವಾರಣೆಗಾಗಿ ದೇವರ ಕಾರ್ಯಗಳನ್ನು ನಿರ್ವಹಿಸುವ ದಯಾಮಯನೂ ನಂಬಿಕಸ್ಥನೂ ಆದ ಪ್ರಧಾನ ಯಾಜಕನಾಗಬೇಕಾಗಿತ್ತು.
18ಸ್ವತಃ ತಾವೇ ಶೋಧನೆಗೊಳಗಾಗಿ ಯಾತನೆಯನ್ನು ಅನುಭವಿಸಿದ್ದರಿಂದ ಶೋಧನೆಗೊಳಗಾಗುವವರಿಗೆ ನೆರವಾಗಲು ಯೇಸು ಸಮರ್ಥರಾದರು.

### ಮೋಶೆಗಿಂತ ಯೇಸು ಮಿಗಿಲಾದವರು

**3** ಹೀಗಿರುವಲ್ಲಿ ದೇವಜನರಾದ ಸಹೋದರರೇ, ಸ್ವರ್ಗಸೌಭಾಗ್ಯದಲ್ಲಿ ಸಹಭಾಗಿಗಳಾಗಲು ಕರೆಹೊಂದಿದವರೇ, ದೇವರು ಕಳುಹಿಸಿದಂಥವರು ಹಾಗೂ ನಾವು ವಿಶ್ವಾಸಿಸುವ ಧರ್ಮದ ಪ್ರಧಾನ ಯಾಜಕರು ಆದ ಯೇಸುವನ್ನು ಭಕ್ತಿಯಿಂದ ಧ್ಯಾನಿಸಿರಿ.
2ದೇವಮಂದಿರ ಸೇವೆಯಲ್ಲಿ ಮೋಶೆ ಪ್ರಾಮಾಣಿಕನಾಗಿದ್ದಂತೆಯೇ ಯೇಸುಸ್ವಾಮಿ ತಮ್ಮನ್ನು ನೇಮಿಸಿದವರಿಗೆ ಪ್ರಮಾಣಿಕರಾಗಿದ್ದರು.
3ಆದರೆ, ಮನೆಕಟ್ಟುವವನು ಮನೆಗಿಂತ ಹೆಚ್ಚಿನ ಮಾನ್ಯತೆ ಉಳ್ಳವನಾಗಿರುವಂತೆ ಯೇಸು, ಮೋಶೆಗಿಂತಲೂ ಹೆಚ್ಚಿನ ಗೌರವಕ್ಕೆ ಪಾತ್ರರು.
4ಪ್ರತಿಯೊಂದು ಮನೆಗೂ ಕಟ್ಟಿದವನೊಬ್ಬನು ಇರುತ್ತಾನೆ; ಸಮಸ್ತವನ್ನು ಕಟ್ಟಿದವರಾದರೋ ದೇವರೇ.
5ಮೋಶೆ ದೇವರ ಮನೆಗೆಲ್ಲಾ ಪ್ರಾಮಾಣಿಕ ದಾಸನಾಗಿದ್ದನು; ಮುಂದೆ ಪ್ರಕಟವಾಗಬೇಕಿದ್ದ ಸಂಗತಿಗಳಿಗೆ ಸಾಕ್ಷಿಯಾಗಿದ್ದನು.
6ಕ್ರಿಸ್ತ ಯೇಸುವಾದರೋ, ದೇವರ ಮನೆಯಲ್ಲಿ ಅಧಿಕಾರ ಹೊಂದಿದ ಪ್ರಾಮಾಣಿಕ ಪುತ್ರನಾಗಿದ್ದಾರೆ. ನಾವು ನಿರೀಕ್ಷಿಸುತ್ತಿರುವ ಭಾಗ್ಯದ ಬಗ್ಗೆ ನಮಗಿರುವ ಶ್ರದ್ಧೆಯನ್ನೂ ಶೌರ್ಯವನ್ನೂ ಕಳೆದುಕೊಳ್ಳದೆ ದೃಢವಾಗಿದ್ದರೆ, ನಾವೇ ಅವರ ಮನೆಯಾಗಿರುತ್ತೇವೆ.

### ವಿಶ್ರಾಂತಿಯ ನೆಲೆ

7 ಆದಕಾರಣ ಪವಿತ್ರಾತ್ಮ ಹೇಳುವ ಪ್ರಕಾರ:
"ದೇವರ ದನಿಯನು ಕೇಳುವಿರಾದರೆ
ನೀವಿಂದು

ನಿಮ್ಮ ಪೂರ್ವಜರಂತೆ ಕಲ್ಲಾಗಿಸದಿರಿ
ಹೃದಯವನು.
8 ಮರುಭೂಮಿಯಲ್ಲವರು ದೇವರನು
ಪರೀಕ್ಷಿಸಿದರು
ಆತನ ವಿರುದ್ಧ ಅಲ್ಲೇ ದಂಗೆ ಎದ್ದರು.
9 ಎಂದೇ ದೇವರಿಂತೆಂದರು:
ಮರುಭೂಮಿಯಲಿ ಅವರೆನ್ನನು ಕೆಣಕಿದರು;
ನಲವತ್ತು ವರುಷ ನಾನೆಸಗಿದ
ಮಹತ್ಕಾರ್ಯಗಳನು
ಕಂಡರಾದರೂ ಎನ್ನ ಕೆಣಕಿ ಪರೀಕ್ಷಿಸಿದರು.
10 ಎಂತಲೇ ಆ ಜನರ ವಿರುದ್ಧ ಕೆರಳಿ ಇಂತೆಂದೆನು:
ಹಾದಿ ತಪ್ಪಿದ ಹೃದಯಿಗಳು ಇವರೆಂದಿಗೂ,
ಗ್ರಹಿಸಿಕೊಳ್ಳರಿವರು ಎನ್ನ ಮಾರ್ಗವನು
11 ಸೇರರು ಎನ್ನ ವಿಶ್ರಾಂತಿಯ ನೆಲೆಯನು
ಇವರೆಂದಿಗೂ
ಎಂದು ಸಿಟ್ಟುಗೊಂಡು ಶಪಥ ಮಾಡಿದೆನು."

12 ಸಹೋದರರೇ, ಜೀವಸ್ವರೂಪರಾದ ದೇವರನ್ನು ಬಿಟ್ಟಗಲುವ ಕೆಟ್ಟಬುದ್ಧಿಯೂ ಅವಿಶ್ವಾಸವೂ
ನಿಮ್ಮಲ್ಲಿ ಯಾರಿಗೂ ಇರದಂತೆ ಎಚ್ಚರಿಕೆಯಾಗಿರಿ. 13ನಿಮ್ಮಲ್ಲಿ ಯಾರೂ ಪಾಪದಿಂದ ಮೋಸಹೋಗಿ
ಕಠಿಣರಾಗದಂತೆ "ಇಂದು" ಎನ್ನುವ ಕಾಲವು ಇರುವ ತನಕ ಪ್ರತಿನಿತ್ಯವು ಒಬ್ಬರನ್ನೊಬ್ಬರು ಎಚ್ಚರಿಸಿರಿ.
14ನಾವೆಲ್ಲರೂ ಕ್ರಿಸ್ತಯೇಸುವಿನೊಡನೆ ಸಹಬಾಧ್ಯರು; ಆದರೆ, ಪ್ರಾರಂಭದಲ್ಲಿ ನಮಗಿದ್ದ ನಂಬಿಕೆ–
ನಿರೀಕ್ಷೆಯನ್ನು ಕೊನೆಯವರೆಗೂ ಸ್ಥಿರವಾಗಿ ಇರಿಸಿಕೊಳ್ಳಬೇಕು.

15 "ದೇವರ ದನಿಯನು ಕೇಳುವಿರಾದರೆ ನೀವಿಂದು
ನಿಮ್ಮ ಪೂರ್ವಜರಂತೆ ಕಲ್ಲಾಗಿಸದಿರಿ
ಹೃದಯವನು
ಮರುಭೂಮಿಯಲ್ಲಿ ದೇವರ ವಿರುದ್ಧ
ದಂಗೆಯೆದ್ದವರವರು."

16 ಇಲ್ಲಿ, ದೇವರ ದನಿಯನು ಕೇಳಿಯೂ ದಂಗೆ ಎದ್ದವರು ಯಾರು? ಮೋಶೆಯ ಮುಂದಾಳತ್ವದಲ್ಲಿ
ಈಜಿಪ್ಟ್ ದೇಶವನ್ನು ಬಿಟ್ಟುಬಂದ ಎಲ್ಲರೂ ಅಲ್ಲವೇ? 17ನಲವತ್ತು ವರ್ಷಗಳು ದೇವರು ಸಿಟ್ಟುಗೊಂಡದ್ದು
ಯಾರ ಮೇಲೆ? ಪಾಪ ಮಾಡಿದವರ ಮೇಲಲ್ಲವೇ? ಅವರ ಶವಗಳು ಬಿದ್ದುದು ಮರುಭೂಮಿಯಲ್ಲಲ್ಲವೇ?
18"ಸೇರರು ಎನ್ನ ವಿಶ್ರಾಂತಿಯ ನೆಲೆಯನು ಇವರೆಂದಿಗೂ" ಎಂದು ಯಾರನ್ನು ಕುರಿತು ಶಪಥ
ಮಾಡಿದರು? ತಮಗೆ ಅವಿಧೇಯರಾದ ಜನರನ್ನು ಕುರಿತಲ್ಲವೇ? 19ಆ ವಿಶ್ರಾಂತಿಯ ನೆಲೆಯನ್ನು ಅವರು
ಸೇರದೆ ಹೋದದ್ದು ತಮ್ಮ ಅವಿಶ್ವಾಸದಿಂದಲೇ ಎಂಬುದು ನಮಗೆ ಸ್ಪಷ್ಟವಾಗುತ್ತದೆ.

**4** ದೇವರು ತಮ್ಮ ವಿಶ್ರಾಂತಿಯ ನೆಲೆಯನ್ನು ನೀಡುವುದಾಗಿ ಮಾಡಿದ ವಾಗ್ದಾನ ಇನ್ನೂ ರದ್ದಾಗದೆ
ಉಳಿದಿದೆ. ನಿಮ್ಮಲ್ಲಿ ಯಾರೂ ಆ ವಾಗ್ದಾನದ ಫಲವನ್ನು ಪಡೆಯದೆ ಇರಬಾರದು. ಎಂತಲೇ, ನಾವು
ಭಯಭಕ್ತಿಯಿಂದ ಬಾಳೋಣ. 2ಶುಭವಾರ್ತೆಯನ್ನು ಅವರಿಗೆ ಸಾರಲಾದಂತೆ ನಮಗೂ ಸಾರಲಾಯಿತು.
ಅವರು ಅದನ್ನು ಆಲಿಸಿದರು; ಆದರೆ ಅವರಲ್ಲಿ ವಿಶ್ವಾಸವಿರಲಿಲ್ಲ. ಈ ಕಾರಣ, ಅವರು ಕೇಳಿದ
ಸಂದೇಶದಿಂದ ಫಲಪಡೆಯದೆ ಹೋದರು. 3ಲೋಕಾದಿಯಲ್ಲೇ, ದೇವರು ತಮ್ಮ ಸೃಷ್ಟಿಕಾರ್ಯವನ್ನು
ಮುಗಿಸಿದ್ದರೂ ಅವರು, "ಸೇರರು ಎನ್ನ ವಿಶ್ರಾಂತಿಯ ನೆಲೆಯನು ಇವರೆಂದಿಗೂ ಎಂದು ಸಿಟ್ಟುಗೊಂಡು

ಶಪಥ ಮಾಡಿದೆನು," ಎಂದು ಹೇಳಿದ್ದಾರೆ. ವಿಶ್ವಾಸಿಸುವ ನಾವಾದರೋ ಆ ವಿಶ್ರಾಂತಿಯ ನೆಲೆಯನ್ನು ಸೇರುತ್ತೇವೆ. [4]ಪವಿತ್ರಗ್ರಂಥದ ಒಂದೆಡೆಯಲ್ಲಿ, ಏಳನೆಯ ದಿನವನ್ನು ಕುರಿತು: "ದೇವರು ತಮ್ಮ ಸೃಷ್ಟಿಕಾರ್ಯಗಳನ್ನೆಲ್ಲಾ ಮುಗಿಸಿ ಏಳನೆಯ ದಿನದಲ್ಲಿ ವಿಶ್ರಮಿಸಿಕೊಂಡರು," ಎಂದು ಬರೆದಿದೆ. [5]ಮೇಲೆ ಹೇಳಿದ ವಚನದಲ್ಲಾದರೋ, "ಸೇರರು ಎನ್ನ ವಿಶ್ರಾಂತಿಯ ನೆಲೆಯನು ಇವರೆಂದಿಗೂ" ಎಂದಿದೆ. [6]ಆದುದರಿಂದ, ಈ ವಿಶ್ರಾಂತಿಯ ನೆಲೆಯನ್ನು ಸೇರುವ ಸಾಧ್ಯತೆ ಬೇರೆಯವರಿಗಾದರೂ ಇದೆ ಎಂಬುದು ಸ್ಪಷ್ಟವಾಗುತ್ತದೆ. ದೇವರ ವಾಕ್ಯವನ್ನು ಮೊದಲು ಕೇಳಿದವರಾದರೋ, ತಮ್ಮ ಅವಿಶ್ವಾಸದಿಂದ ಅದನ್ನು ಸೇರದೆ ಹೋದರು. [7]ಈ ಕಾರಣದಿಂದಲೇ ದೇವರು, "ಇಂದು" ಎಂದು ಬೇರೊಂದು ದಿನವನ್ನು ಗೊತ್ತುಮಾಡುತ್ತಾರೆ. ಈ ದಿನವನ್ನು ಕುರಿತೇ ದೀರ್ಘಕಾಲದ ನಂತರ ದಾವೀದನ ಮುಖಾಂತರ:

"ದೇವರ ದನಿಯನು ಕೇಳುವಿರಾದರೆ ನೀವಿಂದು
ನಿಮ್ಮ ಪೂರ್ವಜರಂತೆ ಕಲ್ಲಾಗಿಸದಿರಿ
ಹೃದಯವನು,"

ಎಂದು ಹೇಳಿದ್ದಾರೆ.

8 ಯೆಹೋಶುವನು ಆ ಜನರನ್ನು ವಾಗ್ದತ್ತ ವಿಶ್ರಾಂತಿಗೆ ಸೇರಿಸಿದ್ದರೆ ದೇವರು ಬೇರೊಂದು ದಿನವನ್ನು ಗೊತ್ತುಮಾಡುತ್ತಿರಲಿಲ್ಲ. [9]ಆದಕಾರಣ, ದೇವಜನರು ಅನುಭವಿಸುವುದಕ್ಕಿರುವ ಸಬ್ಬತ್ತೆಂಬ ವಿಶ್ರಾಂತಿ ಇನ್ನೂ ಉಳಿದಿದೆ. [10]ದೇವರು ತಮ್ಮ ಸೃಷ್ಟಿಕಾರ್ಯವನ್ನು ಮುಗಿಸಿ ವಿಶ್ರಾಂತಿ ಪಡೆದಂತೆ ದೇವರ ವಿಶ್ರಾಂತಿಯನ್ನು ಪಡೆದವನು ಸಹ ತನ್ನ ಕೆಲಸ ಕಾರ್ಯಗಳನ್ನು ಮುಗಿಸಿ ವಿಶ್ರಾಂತಿಯನ್ನು ಪಡೆಯುತ್ತಾನೆ. [11]ಆದ್ದರಿಂದ ಈ ವಿಶ್ರಾಂತಿಯನ್ನು ಪಡೆಯಲು ನಾವು ಪ್ರಯತ್ನಪಡೋಣ. ನಮ್ಮಲ್ಲಿ ಯಾರೂ ಆ ಜನರಂತೆ ಅವಿಧೇಯತೆಯಿಂದ ವರ್ತಿಸಿ ವಿಶ್ವಾಸ ಭ್ರಷ್ಟರಾಗದೆ ಇರೋಣ.

12 ದೇವರ ವಾಕ್ಯ ಜೀವಂತವಾದುದು, ಕ್ರಿಯಾತ್ಮಕವಾದುದು; ಎಂಥ ಇಬ್ಬಾಯಿ ಕತ್ತಿಗಿಂತಲೂ ಹರಿತವಾದುದು. ಪ್ರಾಣ ಮತ್ತು ಆತ್ಮಗಳ, ಕೀಲು ಮತ್ತು ಮಜ್ಜೆಗಳ ಭೇದವನ್ನು ಛೇದಿಸುವಂತಾದ್ದು; ಹೃದಯದ ಆಶೆ ಆಲೋಚನೆಗಳನ್ನು ವಿವೇಚಿಸುವಂತಾದ್ದು. [13]ನಾವು ಯಾರಿಗೆ ಲೆಕ್ಕ ಒಪ್ಪಿಸಬೇಕಾಗಿದೆಯೋ, ಅವರ ಕಣ್ಣಿಗೆ ಮುಚ್ಚುಮರೆಯಾದುದು ಯಾವುದೂ ಇಲ್ಲ. ಅವರ ದೃಷ್ಟಿಗೆ ಎಲ್ಲವೂ ಬಟ್ಟಬಯಲು.

## ಶ್ರೇಷ್ಠಯಾಜಕ ಯೇಸು

14 ಸ್ವರ್ಗಲೋಕಕ್ಕೆ ಏರಿಹೋದ ದೇವರ ಪುತ್ರನಾದ ಯೇಸುವೇ ನಮಗೆ ಶ್ರೇಷ್ಠ ಹಾಗೂ ಪ್ರಧಾನಯಾಜಕ ಆಗಿರುವುದರಿಂದ ನಾವು ನಿವೇದಿಸುವ ವಿಶ್ವಾಸದಲ್ಲಿ ಸದೃಢರಾಗಿರೋಣ. [15]ಈ ಪ್ರಧಾನ ಯಾಜಕ, ನಮ್ಮ ದೌರ್ಬಲ್ಯಗಳನ್ನು ಕಂಡು ಅನುಕಂಪ ತೋರದೆ ಇರುವವರಲ್ಲ. ಅವರು, ನಮ್ಮಂತೆಯೇ ಇದ್ದುಕೊಂಡು ಎಲ್ಲಾ ವಿಷಯಗಳಲ್ಲೂ ಶೋಧನೆ–ಸಂಕಟಗಳನ್ನು ಅನುಭವಿಸಿದರು. ಆದರೆ ಪಾಪವನ್ನು ಮಾತ್ರ ಮಾಡಲಿಲ್ಲ. [16]ಆದಕಾರಣ, ನಾವು ಸಮಯೋಚಿತ ಸಹಾಯವನ್ನು ಅವರ ಅನುಗ್ರಹದಿಂದ ಪಡೆಯಲು ಮತ್ತು ಅವರ ಕರುಣೆಯನ್ನು ಸವಿಯಲು ಧೈರ್ಯದಿಂದ ಅವರ ಕೃಪಾಸನವನ್ನು ಸಮೀಪಿಸೋಣ.

**5** ಪ್ರತಿಯೊಬ್ಬ ಪ್ರಧಾನ ಯಾಜಕ ಜನರ ಮಧ್ಯದಿಂದ ಆರಿಸಲಾದವನು; ಜನರ ಪರವಾಗಿ ದೇವರ ಸನ್ನಿಧಿಯಲ್ಲಿ ಸೇವೆ ಸಲ್ಲಿಸಲು ಮತ್ತು ಪಾಪಪರಿಹಾರಕ್ಕಾಗಿ ಬಲಿಗಳನ್ನೂ ಕಾಣಿಕೆಗಳನ್ನೂ ಸಮರ್ಪಿಸಲು ನೇಮಕಗೊಂಡವನು. [2]ತಾನೂ ದುರ್ಬಲ ಮಾನವನಾದ ಕಾರಣ, ಆತನು ಅಜ್ಞಾನಿಗಳನ್ನೂ ದುರ್ಮಾರ್ಗಿಗಳನ್ನೂ ಸಹಾನುಭೂತಿಯಿಂದ ಕಾಣಬಲ್ಲನು. [3]ಜನರಿಗೋಸ್ಕರ ಹೇಗೋ ಹಾಗೆಯೇ ತನ್ನ ದೌರ್ಬಲ್ಯದ ನಿಮಿತ್ತ ತನಗೋಸ್ಕರವೂ ಆತನು ಪಾಪಪರಿಹಾರಕಬಲಿಯನ್ನು ಅರ್ಪಿಸಬೇಕಾಗಿದೆ. [4]ಅಲ್ಲದೆ,

ಪ್ರಧಾನ ಯಾಜಕನೆಂಬ ಗೌರವ ಪದವಿಯನ್ನು ತನ್ನಷ್ಟಕ್ಕೆ ತಾನೇ ಯಾರೂ ವಹಿಸಿಕೊಳ್ಳರು. ಆರೋನನಂತೆ ಅವರೂ ದೇವರಿಂದ ಕರೆ ಹೊಂದಿದವರಾಗಿರಬೇಕು.

5 ಅದೇ ರೀತಿ ಕ್ರಿಸ್ತಯೇಸು, ಪ್ರಧಾನ ಯಾಜಕನೆಂಬ ಉನ್ನತ ಪದವಿಗೆ ತನ್ನನ್ನೇ ಏರಿಸಿಕೊಳ್ಳಲಿಲ್ಲ.

"ನೀನೇ ನನ್ನ ಪುತ್ರನು;
ನಾನೇ ನಿನ್ನನ್ನು ಪಡೆದಿದ್ದೇನೆ," ಎಂದ
ದೇವರೇ ಅವರನ್ನು ಆ ಪದವಿಗೆ
ಏರಿಸಿದರು.

6 ಅವರೇ ಮತ್ತೊಂದು ಕಡೆಯಲ್ಲಿ:
"ನೀನು ಸದಾಕಾಲವೂ
ಮೆಲ್ಕಿಸದೇಕನ ಪರಂಪರೆಗೆ ಸೇರಿದ
ಯಾಜಕ," ಎಂದಿದ್ದಾರೆ.

7 ಕ್ರಿಸ್ತಯೇಸು ಈ ಭೂಲೋಕದಲ್ಲಿದ್ದಾಗ, ತಮ್ಮನ್ನು ಮರಣದಿಂದ ಕಾಪಾಡಲು ಶಕ್ತರಾದ ದೇವರನ್ನು ಉಚ್ಚಸ್ವರದಿಂದ ಕೂಗುತ್ತಾ ಕಣ್ಣೀರಿಡುತ್ತಾ ವಿನಂತಿಸಿ ಪ್ರಾರ್ಥಿಸಿದರು. ಅವರ ಭಯಭಕ್ತಿಯನ್ನು ನೋಡಿ ದೇವರು ಅವರ ಮೊರೆಯನ್ನು ಆಲಿಸಿದರು.
8 ಯೇಸು, ದೇವರ ಪುತ್ರರಾಗಿದ್ದರೂ ಹಿಂಸೆಬಾಧೆಗಳನ್ನು ತಪ್ಪಿಸಿಕೊಳ್ಳದೆ ವಿಧೇಯತೆಯನ್ನು ಅನುಭವದಿಂದ ಅರಿತುಕೊಂಡರು.
9 ಹೀಗೆ, ಅವರು ಸ್ವತಃ ಪರಿಪೂರ್ಣರಾಗಿ ತಮಗೆ ವಿಧೇಯರಾಗುವ ಎಲ್ಲರಿಗೂ ಶಾಶ್ವತ ಜೀವೋದ್ಧಾರಕ್ಕೆ ಕಾರಣರಾದರು.
10 ಅಲ್ಲದೆ, ದೇವರಿಂದ, "ಮೆಲ್ಕಿಸದೇಕನ ಪರಂಪರೆಗೆ ಸೇರಿದ ಪ್ರಧಾನ ಯಾಜಕ," ಎನಿಸಿಕೊಂಡರು.

**ವಿಶ್ವಾಸದಲ್ಲಿ ಪ್ರಗತಿ**

11 ಈ ವಿಷಯದಲ್ಲಿ ನಾವು ಹೇಳಬೇಕಾದುದು ಎಷ್ಟೋ ಇದೆ. ಆದರೆ ನಿಮ್ಮ ಬುದ್ಧಿಯು ಮಂದವಾಗಿರುವುದರಿಂದ ಅದನ್ನೆಲ್ಲಾ ವಿವರಿಸುವುದು ಕಷ್ಟವಾಗಿದೆ.
12 ಇಷ್ಟರೊಳಗೆ ನೀವು ಇತರರಿಗೆ ಬೋಧಿಸಲು ಶಕ್ತರಾಗಬೇಕಾಗಿತ್ತು; ಆದರೆ ದೇವರ ವಾಕ್ಯದ ಮೂಲ ಪಾಠಗಳನ್ನೇ ಇತರರು ನಿಮಗೆ ಮತ್ತೆ ಹೇಳಿಕೊಡಬೇಕಾಗಿದೆ. ಗಟ್ಟಿಯಾದ ಆಹಾರವನ್ನು ಉಣ್ಣುವ ಬದಲು ನೀವಿನ್ನೂ ಹಾಲನ್ನೇ ಕುಡಿಯಬೇಕಾಗಿದೆ.
13 ಹಾಲು ಕುಡಿಯಬೇಕಾದವನು ಹಸುಗೂಸು. ನ್ಯಾಯ ನೀತಿಯ ಅನುಭವ ಅವನಿಗಿಲ್ಲ.
14 ಗಟ್ಟಿಯಾದ ಆಹಾರ ಬೆಳೆದವರಿಗೆ; ಸ್ವಂತ ಅನುಭವದಿಂದ ಒಳ್ಳೆಯದಾವುದು ಕೆಟ್ಟದ್ದಾವುದು ಎಂದು ಅರಿತುಕೊಳ್ಳಬಲ್ಲವರಿಗೆ.

**6** ಆದುದರಿಂದ ಕ್ರಿಸ್ತಯೇಸುವನ್ನು ಕುರಿತಾದ ಪ್ರಾಥಮಿಕ ಪಾಠಗಳಲ್ಲೇ ನಿಂತುಬಿಡದೆ ಪ್ರೌಢ ವಿಷಯಗಳತ್ತ ಸಾಗೋಣ.
2 ಜಡಕರ್ಮಗಳನ್ನು ಬಿಟ್ಟು ದೇವರಲ್ಲಿ ವಿಶ್ವಾಸವಿಡುವುದು, ಸ್ನಾನಸಂಸ್ಕಾರಗಳು, ಹಸ್ತನಿಕ್ಷೇಪ, ಸತ್ತವರ ಪುನರುತ್ಥಾನ, ನಿತ್ಯವಾದ ನ್ಯಾಯತೀರ್ಪು–ಈ ಬೋಧನಾ ಅಸ್ತಿವಾರವನ್ನು ಮತ್ತೆ ಮತ್ತೆ ಹಾಕಬೇಕಾಗಿಲ್ಲ.
3 ದೇವರ ಚಿತ್ತವಾದರೆ ಪ್ರೌಢ ವಿಷಯಗಳತ್ತ ಪ್ರಗತಿಪರರಾಗೋಣ.

4 ಒಬ್ಬನು, ಒಮ್ಮೆ ಜ್ಞಾನೋದಯವನ್ನು ಪಡೆದು, ಸ್ವರ್ಗೀಯ ವರದಾನಗಳನ್ನು ಆಸ್ವಾದಿಸಿ, ಪವಿತ್ರಾತ್ಮ ಅವರ ಸಹಭಾಗಿಯಾಗಿ,
5 ದೇವರ ವಾಕ್ಯದ ಸವಿಯುಂಡು, ಬರಲಿರುವ ಯುಗದ ವೈಭವವನ್ನು ಮನಗಂಡು,
6 ಅನಂತರವೂ ವಿಶ್ವಾಸಭ್ರಷ್ಟನಾದರೆ, ಅಂಥವನು ಪಶ್ಚಾತ್ತಾಪಪಟ್ಟು ದೈವಾಭಿಮುಖನಾಗುವುದು ಅಸಾಧ್ಯ. ಏಕೆಂದರೆ, ಅಂಥವನು ತನ್ನ ಪಾಲಿಗೆ ದೇವರ ಪುತ್ರನನ್ನು ಪುನಃ ಶಿಲುಬೆಗೆ ಏರಿಸಿ ಅವರನ್ನು ಬಹಿರಂಗವಾಗಿ ಅವಮಾನಗೊಳಿಸುವವನಾಗುತ್ತಾನೆ.

7 ಭೂಮಿಯು ಕಾಲಾನುಕಾಲಕ್ಕೆ ತನ್ನ ಮೇಲೆ ಬೀಳುವ ಮಳೆಯ ನೀರನ್ನು ಹೀರಿಕೊಂಡು ವ್ಯವಸಾಯಗಾರನಿಗೆ ಅನುಕೂಲವಾದ ಬೆಳೆಯನ್ನು ಕೊಟ್ಟರೆ ದೇವರ ಆಶೀರ್ವಾದವನ್ನು ಪಡೆಯುತ್ತದೆ.

[8]ಆದರೆ, ಅದು ಮುಳ್ಳುಗಿಡಗಳನ್ನೂ ಕಳೆಗಳನ್ನೂ ಬೆಳೆಸಿದರೆ ಅಪ್ರಯೋಜಕವೆನಿಸಿಕೊಂಡು ಶಾಪಕ್ಕೆ ಗುರಿಯಾಗುತ್ತದೆ; ಕೊನೆಗದು ಬೆಂಕಿಗೆ ತುತ್ತಾಗುತ್ತದೆ.

9 ಪ್ರಿಯರೇ, ನಾವು ಈ ರೀತಿ ಹೇಳಿದೆವಾದರೂ ನಿಮ್ಮ ಪರಿಸ್ಥಿತಿ ಉತ್ತಮವಾಗಿದೆ ಮತ್ತು ನೀವು
ಜೀವೋದ್ಧಾರದ ಮಾರ್ಗದಲ್ಲಿ ಇದ್ದೀರಿ ಎಂಬ ದೃಢವಾದ ನಂಬಿಕೆ ನನಗಿದೆ. [10]ನೀವು ದೇವಜನರಿಗೆ
ಉಪಚಾರ ಮಾಡಿದ್ದೀರಿ, ಮಾಡುತ್ತಲೂ ಇದ್ದೀರಿ. ದೇವರ ಹೆಸರಿನಲ್ಲಿ ನೀವು ಮಾಡಿದ ಪ್ರೀತಿಪೂರ್ವಕವಾದ ಸೇವೆಯನ್ನು ದೇವರು ಮರೆಯುವಂತಿಲ್ಲ. ಅವರು ಅನ್ಯಾಯ ಮಾಡುವವರೇನೂ ಅಲ್ಲ.

11 ನೀವು ಹೊಂದಿರುವ ನಿರೀಕ್ಷೆ ಪೂರ್ಣವಾಗಿ ಕೈಗೂಡುವಂತೆ ನಿಮ್ಮಲ್ಲಿ ಪ್ರತಿಯೊಬ್ಬನೂ ಮೊದಲಿನ
ಆಸಕ್ತಿಯನ್ನು ಕಡೆಯತನಕವೂ ತೋರಿಸಬೇಕೆಂದು ಹಾರೈಸುತ್ತೇನೆ. [12]ನೀವು ಆಲಸಿಗಳಾಗಿರಬಾರದು;
ವಿಶ್ವಾಸದಿಂದಲೂ ಬಹು ತಾಳ್ಮೆಯಿಂದಲೂ ದೈವ ವಾಗ್ದಾನಗಳನ್ನು ಬಾಧ್ಯವಾಗಿಸಿಕೊಂಡವರನ್ನು ಅನುಸರಿಬೇಕು.

## ದೇವರ ಸ್ಥಿರವಾಗ್ದಾನ

13 ದೇವರು ಅಬ್ರಹಾಮನಿಗೆ ವಾಗ್ದಾನ ಮಾಡಿದಾಗ ತಮ್ಮ ಮಾತನ್ನು ಈಡೇರಿಸುವುದಾಗಿ ಶಪಥ ಮಾಡಿದರು. ತಮಗಿಂತಲೂ ಮೇಲಾದವರಾರೂ ಇಲ್ಲವಾದ ಕಾರಣ ತಮ್ಮ ಸ್ವಂತ ಹೆಸರಿನಲ್ಲೇ ಶಪಥ ಮಾಡಿದರು.

14 "ಖಂಡಿತವಾಗಿಯೂ ನಾನು ನಿನ್ನನ್ನು
ಆಶೀರ್ವದಿಸುವೆನು;
ನಿನ್ನ ಸಂತಾನವನ್ನು ಹೆಚ್ಚಿಸಿಯೇ
ತೀರುವೆನು," ಎಂದರು.

[15]ಅಂತೆಯೇ, ಅಬ್ರಹಾಮನು ದೀರ್ಘಕಾಲ ಕಾದಿದ್ದು ದೇವರ ವಾಗ್ದಾನದ ಫಲವನ್ನು ಪಡೆದನು.
[16]ಮನುಷ್ಯರು ತಮಗಿಂತಲೂ ಹೆಚ್ಚಿನವರ ಮೇಲೆ ಆಣೆಯಿಡುವುದು ವಾಡಿಕೆ. ಹೀಗೆ ಆಣೆಯಿಟ್ಟು
ಪ್ರಮಾಣಮಾಡಿದರೆ ಎಲ್ಲ ವಿವಾದಗಳು ಕೊನೆಗೊಳ್ಳುತ್ತವೆ. [17]ಹಾಗೆಯೇ, ದೇವರು ತಮ್ಮ ವಾಗ್ದಾನವನ್ನು
ಬಾಧ್ಯವಾಗಿ ಪಡೆಯುವವರಿಗೆ ತಮ್ಮ ಸಂಕಲ್ಪ ಅಚಲವಾದುದು ಎಂಬುದನ್ನು ಸ್ಪಷ್ಟಪಡಿಸಲು, ಶಪಥಮಾಡಿ
ಸ್ಥಿರಪಡಿಸಿದರು. [18]ದೇವರ ವಾಗ್ದಾನ ಮತ್ತು ಶಪಥ ಇವೆರಡೂ ಅಚಲವಾದ ಆಧಾರಗಳು. ಇವುಗಳ
ವಿಷಯವಾಗಿ ದೇವರು ನಮಗೆ ಮೋಸಮಾಡುವವರೇ ಅಲ್ಲ. ಇದರಿಂದಾಗಿ, ದೇವರ ಆಶ್ರಯಕ್ಕಾಗಿ ಧಾವಿಸಿ
ಬಂದಿರುವ ನಾವು, ನಮ್ಮ ಮುಂದಿರಿಸಿರುವ ನಂಬಿಕೆ ನಿರೀಕ್ಷೆಯಲ್ಲಿ ಸ್ಥಿರವಾಗಿ ನಿಲ್ಲಲು ಬಲವಾದ ಪ್ರೋತ್ಸಾಹ
ದೊರೆತಂತಾಯಿತು. [19]ಈ ನಂಬಿಕೆ, ನಿರೀಕ್ಷೆ ನಮ್ಮ ಬಾಳನೌಕೆಯ ಸ್ಥಿರವಾದ ಹಾಗೂ ಸುರಕ್ಷಿತವಾದ
ಲಂಗರಿನಂತಿದೆ. ಇದು ತೆರೆಯ ಹಿಂದಿರುವ ಸ್ವರ್ಗೀಯ ಗರ್ಭಗುಡಿಯನ್ನು ಪ್ರವೇಶಿಸುವಂಥದ್ದು.
[20]ಸದಾಕಾಲವೂ ಮೆಲ್ಕಿಸದೇಕನ ಪರಂಪರೆಗೆ ಸೇರಿದ ಪ್ರಧಾನ ಯಾಜಕರಾದ ಯೇಸು ನಮ್ಮ ಮುಂದಾಳಾಗಿ
ಹೋಗಿ ಆ ಗರ್ಭಗುಡಿಯನ್ನು ಪ್ರವೇಶಿಸಿದ್ದಾರೆ.

## ಮೆಲ್ಕಿಸದೇಕನ ಪರಂಪರೆಯ ಯಾಜಕ

**7** ಈ ಮೆಲ್ಕಿಸದೇಕನು ಸಾಲೇಮ್ ನಗರದ ರಾಜನೂ ಮಹೋನ್ನತ ದೇವರ ಯಾಜಕನೂ ಆಗಿದ್ದನು.
ಶತ್ರುರಾಜರನ್ನು ಗೆದ್ದು ಹಿಂದಿರುಗುತ್ತಿದ್ದ ಅಬ್ರಹಾಮನನ್ನು ಈತನು ಎದುರುಗೊಂಡು ಆಶೀರ್ವದಿಸಿದನು.
[2]ಆಗ ಅಬ್ರಹಾಮನು ತಾನು ಗೆದ್ದು ತಂದಿದ್ದ ಎಲ್ಲದರಲ್ಲೂ ದಶಮಾಂಶವನ್ನು ಆತನಿಗೆ ಕೊಟ್ಟು
ಗೌರವಿಸಿದನು. ಮೆಲ್ಕಿಸದೇಕ ಎಂಬ ಹೆಸರಿನ ಮೂಲಾರ್ಥ, 'ನ್ಯಾಯ ನೀತಿಯ ಅರಸ.' ಅಲ್ಲದೆ, ಆತನು
ಸಾಲೇಮಿನ ಅರಸನೂ ಆಗಿದ್ದನು. ಆದ್ದರಿಂದ 'ಶಾಂತಿಸಮಾಧಾನದ ಅರಸ' ಎಂಬ ಅರ್ಥವೂ ಉಂಟು.

3ಆತನಿಗೆ ತಂದೆತಾಯಿಯಾಗಲಿ ವಂಶಾವಳಿಯಾಗಲಿ ಇಲ್ಲ. ಆತನ ಜನ್ಮಕ್ಕೆ ಆದಿಯಾಗಲಿ, ಜೀವನಕ್ಕೆ
ಅಂತ್ಯವಾಗಲಿ ಇಲ್ಲ. ಆತನು ದೇವಪುತ್ರನನ್ನು ಹೋಲುತ್ತಾನೆ. ಶಾಶ್ವತ ಯಾಜಕನಾಗಿ ಉಳಿಯುತ್ತಾನೆ.
4 ನಮ್ಮ ಪಿತಾಮಹ ಅಬ್ರಹಾಮನೇ ತಾನು ಗೆದ್ದುತಂದ ಶ್ರೇಷ್ಠ ವಸ್ತುಗಳಲ್ಲಿ ದಶಮಾಂಶವನ್ನು ಈ
ಮೆಲ್ಕಿಸದೇಕನಿಗೆ ಸಲ್ಲಿಸಿ ಗೌರವಿಸಬೇಕಾದರೆ ಆತನು ಎಂಥಾ ಮಹಾಪುರುಷನೆಂದು ನೀವೇ ಆಲೋಚಿಸಿ
ನೋಡಿ. 5ಲೇವಿಯ ಕುಲದವರಲ್ಲಿ ಯಾಜಕ ಪದವಿಯನ್ನು ಹೊಂದಿದವರು ಜನರಿಂದ, ಅಂದರೆ
ಅಬ್ರಹಾಮನ ವಂಶಜರಾದ ತಮ್ಮ ಸ್ವಜನರಿಂದ, ದಶಮಾಂಶವನ್ನು ತೆಗೆದುಕೊಳ್ಳುವುದಕ್ಕೆ ಧರ್ಮಶಾಸ್ತ್ರದಲ್ಲಿ
ಅಪ್ಪಣೆ ಉಂಟು. 6ಆದರೆ ಲೇವಿಯ ಕುಲದವನಲ್ಲದ ಮೆಲ್ಕಿಸದೇಕನು ಅಬ್ರಹಾಮನಿಂದಲೇ
ದಶಮಾಂಶವನ್ನು ಪಡೆದನು; ಮಾತ್ರವಲ್ಲದೆ, ದೇವರ ವಾಗ್ದಾನವನ್ನು ಪಡೆದ ಅಬ್ರಹಾಮನನ್ನೇ
ಆಶೀರ್ವದಿಸಿದನು. 7ಆಶೀರ್ವದಿಸುವವನು, ಆಶೀರ್ವಾದ ಪಡೆಯುವವನಿಗಿಂತ ದೊಡ್ಡವನು ಎನ್ನುವುದು
ನಿರ್ವಿವಾದ. 8ಇದಲ್ಲದೆ, ದಶಮಾಂಶವನ್ನು ಪಡೆಯುತ್ತಿರುವ ಲೇವಿಯರು ಕೇವಲ ಮರ್ತ್ಯ ಮಾನವರು;
ಅದನ್ನು ಪಡೆದ ಮೆಲ್ಕಿಸದೇಕನು ತಾನು ಅಮರ್ತ್ಯ ಯಾಜಕನೆಂದು ಸಾಕ್ಷ್ಯಾಧಾರ ಪಡೆದವನು. 9ಅಷ್ಟೇ
ಅಲ್ಲ, ದಶಮಾಂಶವನ್ನು ತೆಗೆದುಕೊಳ್ಳುತ್ತಿದ್ದ ಲೇವಿಯೂ ಕೂಡ ಅಬ್ರಹಾಮನ ಮುಖಾಂತರ
ದಶಮಾಂಶವನ್ನು ತೆತ್ತನು ಎಂದು ಹೇಳಬಹುದು. 10ಹೇಗೆಂದರೆ, ಮೆಲ್ಕಿಸದೇಕನು ಅಬ್ರಹಾಮನನ್ನು
ಎದುರುಗೊಂಡಾಗ, ಲೇವಿಯು ಇನ್ನೂ ಹುಟ್ಟಿರಲಿಲ್ಲವಾದರೂ ತತ್ವಶಃ ಆತನು ತನ್ನ ಪೂರ್ವಜ
ಅಬ್ರಹಾಮನ ಉದರದಲ್ಲಿದ್ದನು.
11 ಇಸ್ರಯೇಲರಿಗೆ ಕೊಡಲಾದ ಧರ್ಮಶಾಸ್ತ್ರ ಲೇವಿಯರ ಯಾಜಕತ್ವದ ಮೇಲೆಯೇ
ಆಧಾರಗೊಂಡಿದೆ. ಲೇವಿಯರ ಈ ಯಾಜಕತ್ವದಿಂದಲೇ ಸಂಪೂರ್ಣ ಸಿದ್ಧಿ ಪ್ರಾಪ್ತವಾಗುತ್ತಿತ್ತಾದರೆ,
ಆರೋನನ ಪರಂಪರೆಗೆ ಸೇರದೆ ಮೆಲ್ಕಿಸದೇಕನ ಪರಂಪರೆಗೆ ಸೇರಿದ ಬೇರೊಬ್ಬ ಯಾಜಕನು
ಕಾಣಿಸಿಕೊಳ್ಳುವ ಅವಶ್ಯಕತೆ ಏನಿತ್ತು? 12ಯಾಜಕತ್ವ ಬದಲಾವಣೆಗೊಂಡರೆ ಧರ್ಮಶಾಸ್ತ್ರವೂ
ಬದಲಾವಣೆಗೊಳ್ಳಬೇಕಾದುದು ಅಗತ್ಯ. 13ಇದನ್ನೆಲ್ಲಾ ಯಾರನ್ನು ಕುರಿತು ಹೇಳಲಾಗಿದೆಯೋ ಆ ವ್ಯಕ್ತಿ
ಹುಟ್ಟಿದ್ದು ಬೇರೊಂದು ಕುಲದಲ್ಲಿ ಆ ಕುಲದಲ್ಲಿ ಎಂದೂ ಯಾರೂ ಬಲಿಪೀಠದ ಸೇವೆ ಮಾಡಿದವರಲ್ಲ.
14ನಮ್ಮ ಪ್ರಭು ಹುಟ್ಟಿದ್ದು ಯೂದನ ಕುಲದಲ್ಲಿ ಎಂಬುದು ತಿಳಿದ ವಿಷಯ. ಮೋಶೆ ಯಾಜಕರನ್ನು ಕುರಿತು
ಮಾತನಾಡಿದಾಗ ಈ ಕುಲದ ಬಗ್ಗೆ ಏನನ್ನೂ ಹೇಳಲಿಲ್ಲ.

## ಮೆಲ್ಕಿಸದೇಕನಂಥ ಪ್ರಧಾನಯಾಜಕ

15 ಹೀಗೆ ಕಾಣಿಸಿಕೊಂಡ ಯಾಜಕ ಮೆಲ್ಕಿಸದೇಕನನ್ನು ಹೋಲುವುದರಿಂದ ನಾವು ಹೇಳುವ
ವಿಷಯ ಇನ್ನೂ ಸ್ಪಷ್ಟವಾಗುತ್ತದೆ. 16ಇವರು ಯಾಜಕರಾದುದು ಅಳಿವಿಲ್ಲದ ಜೀವಶಕ್ತಿಯಿಂದ;
ಕುಲಗೋತ್ರಗಳ ನಿಯಮಾನುಸಾರವಾದ ದೈಹಿಕ ಹುಟ್ಟಿನಿಂದಲ್ಲ. 17"ನೀನು ಸದಾಕಾಲವೂ ಮೆಲ್ಕಿಸದೇಕನ
ಪರಂಪರೆಗೆ ಸೇರಿದ ಯಾಜಕನು," ಎಂದು ಪವಿತ್ರಗ್ರಂಥ ಸಮರ್ಥಿಸುತ್ತದೆ. 18ಹಳೆಯ ಶಾಸನವು ಶಿಥಿಲವೂ
ವಿಫಲವೂ ಆದಕಾರಣ, ಅದನ್ನು ರದ್ದುಗೊಳಿಸಲಾಯಿತು. 19ಏಕೆಂದರೆ, ಧರ್ಮಶಾಸ್ತ್ರವು ಏನನ್ನೂ ಸಿದ್ಧಿಗೆ
ತರಲಿಲ್ಲ. ಅದಕ್ಕೆ ಬದಲಾಗಿ ದೇವರ ಸನ್ನಿಧಿಗೆ ನಮ್ಮನ್ನು ಕೊಂಡೊಯ್ಯಬಲ್ಲ ನಂಬಿಕೆ ನಿರೀಕ್ಷೆಯನ್ನು ನಮಗೆ
ಒದಗಿಸಲಾಗಿದೆ.
20 ಇದಲ್ಲದೆ, ಲೇವಿಯರು ಯಾಜಕರಾದಾಗ, ದೇವರು ಯಾವ ಶಪಥವನ್ನೂ ಮಾಡಲಿಲ್ಲ.
21ಇವರಾದರೋ:

"ಎಂದೆಂದಿಗೂ ನೀ ಯಾಜಕನೆಂದು
ಸರ್ವೇಶ್ವರನೇ ಪ್ರಮಾಣಿಸಿಹರು
ಮನಸ್ಸನ್ನೆಂದೂ ಬದಲಾಯಿಸರವರು,"

ಎಂಬ ಶಪಥ ಪಡೆದಿರುವ ಯಾಜಕರು. 22ಆದ್ದರಿಂದಲೇ, ಯೇಸು ಅತ್ಯಂತ ಶ್ರೇಷ್ಠವಾದ ಒಡಂಬಡಿಕೆಗೆ
ಆಧಾರಪುರುಷರಾಗಿದ್ದಾರೆ.

23 ಲೇವಿಯರ ಯಾಜಕಸೇವೆಯನ್ನು ಮರಣವು ಮೊಟಕುಗೊಳಿಸುತ್ತಿದ್ದುದರಿಂದ ಅನೇಕರು
ಯಾಜಕರಾಗಬೇಕಾಗುತ್ತಿತ್ತು. 24ಯೇಸುವಾದರೋ ಚಿರಂಜೀವಿಯಾದುದರಿಂದ ಅವರ ಯಾಜಕತ್ವವು
ಶಾಶ್ವತವಾಗಿ ಉಳಿಯುವಂಥಾದ್ದು. 25ಆದಕಾರಣ, ತಮ್ಮ ಮುಖಾಂತರ ದೇವರನ್ನು ಅರಸುವವರನ್ನು
ಯೇಸು ಸಂಪೂರ್ಣವಾಗಿ ಉದ್ಧಾರಮಾಡಬಲ್ಲರು. ಅಂಥವರ ಪರವಾಗಿ ವಿಜ್ಞಾಪಿಸಲೆಂದೇ ಯೇಸು ಸದಾ
ಬದುಕಿರುವರು.

26 ನಮಗೆ ಬೇಕಾಗಿದ್ದ ಪ್ರಧಾನ ಯಾಜಕರು ಯೇಸುವೇ. ಇವರು ಪರಿಶುದ್ಧರು, ನಿರ್ದೋಷಿ,
ನಿಷ್ಕಳಂಕರು, ಪಾಪಿಗಳಿಂದ ಪ್ರತ್ಯೇಕಿಸಲಾದವರು, ಗಗನಮಂಡಲಗಳಿಗಿಂತಲೂ ಉನ್ನತದಲ್ಲಿರುವವರು.
27ಇವರು ಮಿಕ್ಕ ಪ್ರಧಾನ ಯಾಜಕರಂತೆ ಮೊದಲು ಸ್ವಂತ ಪಾಪಗಳಿಗಾಗಿಯೂ ಅನಂತರ ಜನರ
ಪಾಪಗಳಿಗಾಗಿಯೂ ದಿನಂಪ್ರತಿ ಪರಿಹಾರಬಲಿಯನ್ನು ಒಪ್ಪಿಸಬೇಕಾಗಿಲ್ಲ. ಏಕೆಂದರೆ, ಜನರ
ಪಾಪಪರಿಹಾರಕ್ಕಾಗಿ ಒಮ್ಮೆಗೇ ಶಾಶ್ವತವಾಗಿ ತಮ್ಮನ್ನು ತಾವೇ ಬಲಿಯಾಗಿ ಸಮರ್ಪಿಸಿಕೊಂಡರು.
28ಧರ್ಮಶಾಸ್ತ್ರ ನೇಮಿಸುವ ಪ್ರಧಾನ ಯಾಜಕರು ಕುಂದು ಕೊರತೆಯುಳ್ಳ ಮಾನವರು. ಆದರೆ,
ಧರ್ಮಶಾಸ್ತ್ರದ ತರುವಾಯ ಬಂದ ಹಾಗೂ ಶಪಥದಿಂದ ಕೂಡಿದ ದೈವವಾಕ್ಯವು ಸದಾ
ಸರ್ವಸಂಪೂರ್ಣರಾದ ಪುತ್ರನನ್ನೇ ಪ್ರಧಾನ ಯಾಜಕರನ್ನಾಗಿ ನೇಮಿಸುತ್ತದೆ.

### ಹೊಸ ಒಡಂಬಡಿಕೆಯ ಹೊಸ ಯಾಜಕತ್ವ

**8** ಈಗ ಹೇಳುತ್ತಿರುವುದರ ಮುಖ್ಯಾಂಶ ಏನೆಂದರೆ: ಸ್ವರ್ಗದಲ್ಲಿ ಮಹೋನ್ನತ ದೇವರ ಸಿಂಹಾಸನದ
ಬಲಗಡೆಯಲ್ಲಿ ಆಸೀನರಾಗಿರುವಂಥ ಪ್ರಧಾನ ಯಾಜಕ ನಮಗಿದ್ದಾರೆ. 2ಅಲ್ಲಿ, ಆ ಪವಿತ್ರ ಸ್ಥಾನದಲ್ಲಿ
ಮನುಷ್ಯರಿಂದಲ್ಲ, ದೇವರಿಂದಲೇ ನಿರ್ಮಿತವಾದ ನಿಜವಾದ ಗರ್ಭಗುಡಿಯಲ್ಲಿ, ಅವರು ಯಾಜಕ
ಸೇವೆಯನ್ನು ಸಲ್ಲಿಸುತ್ತಿದ್ದಾರೆ.

3 ಪ್ರತಿಯೊಬ್ಬ ಪ್ರಧಾನಯಾಜಕನು ಕಾಣಿಕೆಗಳನ್ನೂ ಬಲಿಗಳನ್ನೂ ಅರ್ಪಿಸುವುದಕ್ಕಾಗಿಯೇ
ನೇಮಕಗೊಂಡಿರುತ್ತಾನೆ. ಆದ್ದರಿಂದ ಸಮರ್ಪಿಸುವುದಕ್ಕೆ ನಮ್ಮ ಈ ಪ್ರಧಾನಯಾಜಕರಿಗೂ ಏನಾದರೂ
ಇರಲೇಬೇಕು. 4ಇವರು ಧರೆಯಲ್ಲೇ ಇದ್ದಿದ್ದರೆ ಯಾಜಕರಾಗಿರುತ್ತಿರಲಿಲ್ಲ. ಏಕೆಂದರೆ ಧರ್ಮಶಾಸ್ತ್ರ ವಿಧಿಸುವ
ಕಾಣಿಕೆಗಳನ್ನು ಸಮರ್ಪಿಸುವುದಕ್ಕೆ ಬೇರೆ ಯಾಜಕರು ಇದ್ದಾರೆ. 5ಸ್ವರ್ಗೀಯ ಗರ್ಭಗುಡಿಯ ಚಿಹ್ನೆ ಹಾಗೂ
ಛಾಯೆಯಾಗಿರುವ ಆಲಯಗಳಲ್ಲಿ ಇಲ್ಲಿಯ ಯಾಜಕರು ಉಪಾಸನೆ ಮಾಡುತ್ತಾರೆ. ಮೋಶೆ
ಗರ್ಭಗುಡಿಯನ್ನು ನಿರ್ಮಿಸಲು ಆರಂಭಿಸಿದಾಗ, ದೇವರು ಆತನಿಗೆ, “ಬೆಟ್ಟದ ಮೇಲೆ ನಾನು ತೋರಿಸಿದ
ನಕ್ಷೆಯ ಪ್ರಕಾರವೇ ನೀನು ಎಲ್ಲವನ್ನೂ ನಿರ್ಮಿಸಬೇಕು,” ಎಂದು ಆಜ್ಞೆಯನ್ನಿತ್ತರು. 6ಯೇಸು, ಆ ಯಾಜಕರ
ಸೇವೆಗಿಂತಲೂ ಶ್ರೇಷ್ಠವಾದ ಯಾಜಕಸೇವೆಯನ್ನು ಕೈಗೊಂಡಿದ್ದಾರೆ. ಯೇಸುವನ್ನು ಮಧ್ಯಸ್ಥರನ್ನಾಗಿ
ಪಡೆದಿರುವ ಒಡಂಬಡಿಕೆಯು ಅಷ್ಟೇ ಶ್ರೇಷ್ಠವಾದುದು. ಏಕೆಂದರೆ ಅದು, ಹಿಂದಿನ ವಾಗ್ದಾನಗಳಿಗಿಂತಲೂ
ಉತ್ತಮವಾದ ವಾಗ್ದಾನಗಳನ್ನು ಆಧರಿಸಿದೆ.

7 ಮೊದಲನೆಯ ಒಡಂಬಡಿಕೆ ದೋಷರಹಿತ ಆಗಿದ್ದಿದ್ದರೆ, ಎರಡನೆಯ ಒಡಂಬಡಿಕೆಯ
ಅವಶ್ಯಕತೆಯೇ ಇರುತ್ತಿರಲಿಲ್ಲ. 8ಆದರೆ ದೇವರು ಆ ಒಡಂಬಡಿಕೆಗೆ ಸೇರಿದ ಜನರನ್ನು ಆರೋಪಿಸುತ್ತಾ
ಇಂತೆಂದಿದ್ದಾರೆ:

“ಇಗೋ, ನಾನು ಇಸ್ರಯೇಲ್
ವಂಶದವರೊಂದಿಗೂ
ಯೆಹೂದ್ಯ ವಂಶದವರೊಂದಿಗೂ
ಹೊಸ ಒಡಂಬಡಿಕೆಯನ್ನು ಮಾಡಿಕೊಳ್ಳುವ
ಕಾಲವು ಬರಲಿದೆ, ಎಂದರು ಸರ್ವೇಶ್ವರ.

9 ಈ ಒಡಂಬಡಿಕೆ, ನಾನು ಪೂರ್ವಜರನ್ನು

ಈಜಿಪ್ಟ್ ದೇಶದಿಂದ ಕೈಹಿಡಿದು ಕರೆತಂದಾಗ
ಮಾಡಿದ ಒಡಂಬಡಿಕೆಯಂತಲ್ಲ;
ಅವರು ನನ್ನ ಒಡಂಬಡಿಕೆಯಲ್ಲಿ ಸ್ಥಿರವಾಗಿ
ನಿಲ್ಲಲಿಲ್ಲ;
ಎಂದೇ, ನಾನು ಅವರನ್ನು ಲಕ್ಷಿಸಲೂ ಇಲ್ಲ,
ಎಂದರು ಸರ್ವೇಶ್ವರ.
10 ಆ ದಿನಗಳು ಬಂದಮೇಲೆ ಇಸ್ರಯೇಲ್
ವಂಶದವರೊಡನೆ
ನಾನು ಮಾಡಿಕೊಳ್ಳುವ ಒಡಂಬಡಿಕೆ
ಹೀಗಿರುವುದು, ಎಂದರು ಸರ್ವೇಶ್ವರ.
ನಾಟಿಸುವೆನು ನನ್ನಾಜ್ಞೆಗಳನು
ಅವರ ಮನದಲಿ
ಬರೆಯುವೆನು ಅವುಗಳನ್ನು ಅವರ ಹೃದಯದಲಿ
ದೇವನಾಗಿರುವೆನು ನಾನವರಿಗೆ
ಅವರಾಗುವರು ಪ್ರಜೆಗಳು ನನಗೆ.
11 **‘ಸರ್ವೇಶ್ವರನನ್ನು ಅರಿತುಕೊಳ್ಳಿರಿ’** ಎಂದು
ನೆರೆಯವನಿಗಾಗಲಿ, ಸೋದರನಿಗಾಗಲಿ
ಯಾರೂ ಬೋಧಿಸಬೇಕಾಗಿಲ್ಲ.
ಹಿರಿಯಕಿರಿಯರು ಎಲ್ಲರೂ ನನ್ನನ್ನು
ಅರಿಯುವರು.
12 ಅವರ ಪಾಪಗಳನ್ನು ಕ್ಷಮಿಸುವೆನು
ಅವರ ತಪ್ಪುನೆಪ್ಪುಗಳನು ನೆನಪಿಗೆ
ತಂದುಕೊಳ್ಳೆನು
ಎಂದರು ಸರ್ವೇಶ್ವರ.”

13 ಇಲ್ಲ **‘ಹೊಸ ಒಡಂಬಡಿಕೆ’** ಎಂದು ಹೇಳಿ, ಹಿಂದಿನದನ್ನು ಹಳೆಯದಾಗಿಸಿದ್ದಾರೆ. ಹಳತಾದುದು ಹಾಗೂ ಮುದಿಯಾದುದು ಅಳಿದು ಹೋಗುವಂಥಾದ್ದು.

### ರಕ್ತದಿಂದ ಪ್ರತಿಷ್ಠಾಪಿತವಾದ ಒಡಂಬಡಿಕೆ

**9** ಹಳೆಯ ಒಡಂಬಡಿಕೆಯಲ್ಲಿ ದೇವಾರಾಧನೆಗೆ ವಿಧಿನಿಯಮಗಳಿದ್ದವು; ಮಾನವನಿರ್ಮಿತ
ದೇವಾಲಯವೂ ಇತ್ತು. 2ಅಂದರೆ, ಒಂದು ಗುಡಾರವನ್ನು ಕಟ್ಟುತ್ತಿದ್ದರು. ಅದರಲ್ಲಿ ಎರಡು ಭಾಗಗಳು
ಇದ್ದವು. ಮೊದಲನೆಯ ಭಾಗಕ್ಕೆ ಪವಿತ್ರ ಸ್ಥಳ ಎಂದು ಹೆಸರು. ಅಲ್ಲಿ, ಒಂದು ದೀಪಸ್ತಂಭ ಮತ್ತು ಒಂದು
ಮೇಜು ಇದ್ದವು. ಆ ಮೇಜಿನ ಮೇಲೆ ಅರ್ಪಣೆಯ ನೈವೇದ್ಯ ರೊಟ್ಟಿಗಳನ್ನು ಇಡುತ್ತಿದ್ದರು. 3ಅದರ
ಎರಡನೆಯ ಭಾಗಕ್ಕೆ ಗರ್ಭಗುಡಿ ಎಂದು ಹೆಸರು. ಈ ಎರಡು ಭಾಗಗಳ ನಡುವೆ ತೆರೆಯಿತ್ತು.
ಗರ್ಭಗುಡಿಯನ್ನು ಈ ತೆರೆ ಮರೆಮಾಡಿತ್ತು. 4ಗರ್ಭಗುಡಿಯಲ್ಲಿ ಚಿನ್ನದ ಧೂಪಾರತಿ ಮತ್ತು ಚಿನ್ನದ
ತಗಡನ್ನು ಸುತ್ತಲೂ ಹೊದಿಸಿದ್ದ ಒಡಂಬಡಿಕೆಯ ಮಂಜೂಷ ಇದ್ದವು. ಈ ಮಂಜೂಷದಲ್ಲಿ ಮನ್ನವನ್ನು
ಇಟ್ಟಿದ್ದ ಚಿನ್ನದ ಪಾತ್ರೆ, ಆರೋನನ ಚಿಗುರಿದ ಕೋಲು ಮತ್ತು ಒಡಂಬಡಿಕೆಯ ಶಿಲಾಶಾಸನಗಳು ಇದ್ದವು.
5ಮಂಜೂಷದ ಮೇಲೆ ದೇವರ ಸಾನ್ನಿಧ್ಯವನ್ನು ಸೂಚಿಸುವ ಕೆರೂಬಿ ಎಂಬ ದೂತರ ಆಕೃತಿಗಳಿದ್ದವು.

ಅವುಗಳ ರೆಕ್ಕೆಗಳು ಕೃಪಾಸನವನ್ನು ಆವರಿಸಿಕೊಂಡಿದ್ದವು. ಸದ್ಯಕ್ಕೆ ಇವನ್ನು ಸವಿಸ್ತಾರವಾಗಿ ವಿವರಿಸಲು
ಸಾಧ್ಯವಿಲ್ಲ.
6 ಹೀಗೆ ಇದೆಲ್ಲಾ ವ್ಯವಸ್ಥಿತವಾಗಿರಲು, ಯಾಜಕರು ಮೊದಲನೆಯ ಭಾಗವಾದ ಪವಿತ್ರ ಸ್ಥಳವನ್ನು
ಮಾತ್ರ ಪ್ರವೇಶಿಸಿ, ಅಲ್ಲಿ ದೇವಾರಾಧನೆಯ ವಿಧಿಗಳನ್ನು ನಿರಂತರವಾಗಿ ನೆರವೇರಿಸುತ್ತಿದ್ದರು. [7]ಆದರೆ
ಎರಡನೆಯ ಭಾಗವಾದ ಗರ್ಭಗುಡಿಯನ್ನು ಪ್ರಧಾನ ಯಾಜಕನೊಬ್ಬನೇ ಪ್ರವೇಶಿಸುತ್ತಿದ್ದನು; ಅದೂ ವರ್ಷಕ್ಕೆ
ಒಮ್ಮೆ ಮಾತ್ರ. ತನ್ನೊಡನೆ ಬಲಿರಕ್ತವನ್ನು ತೆಗೆದುಕೊಳ್ಳದೆ ಅವನು ಅಲ್ಲಿಗೆ ಹೋಗುವಂತಿರಲಿಲ್ಲ. ಆ ರಕ್ತವನ್ನು
ತನಗಾಗಿಯೂ ಜನರು ತಿಳಿಯದೆ ಮಾಡಿದ ಅಪರಾಧಗಳಿಗಾಗಿಯೂ ಅರ್ಪಿಸಬೇಕಾಗಿತ್ತು. [8]ಈ
ವ್ಯವಸ್ಥೆಯಲ್ಲಿ ಗುಡಾರದ ಮೊದಲನೆಯ ಭಾಗ ಇರುವ ತನಕ ಗರ್ಭಗುಡಿಯನ್ನು ಪ್ರವೇಶಿಸುವ ಮಾರ್ಗ
ತೆರೆದಿರುವುದಿಲ್ಲ, ಎಂಬುದನ್ನು ಪವಿತ್ರಾತ್ಮ ಸಾಂಕೇತಿಕವಾಗಿ ತಿಳಿಯಪಡಿಸುತ್ತಾರೆ. [9]ಇವೆಲ್ಲವೂ ಈ ಕಾಲದ
ಪರಿಸ್ಥಿತಿಗೆ ಒಂದು ನಿದರ್ಶನವಾಗಿವೆ. ಈ ವ್ಯವಸ್ಥೆಯ ಪ್ರಕಾರ ಸಮರ್ಪಣೆಯಾಗುತ್ತಿದ್ದ ಕಾಣಿಕೆಗಳೂ
ಬಲಿಗಳೂ ಆರಾಧಕನ ಅಂತರಂಗವನ್ನು ಪೂರ್ಣವಾಗಿ ಶುದ್ಧಗೊಳಿಸಲು ಅಸಮರ್ಥವಾಗಿದ್ದವು.
[10]ಏಕೆಂದರೆ, ಈ ಕಾಣಿಕೆಗಳು ಮತ್ತು ಬಲಿಗಳು ಕೇವಲ ಲೌಕಿಕವಾದುವು. ಅನ್ನ ಪಾನೀಯಗಳಿಂದಲೂ
ನಾನಾ ತರದ ಸ್ನಾನವಿಧಿಗಳಿಂದಲೂ ಕೂಡಿದ ಇವು ಸುಧಾರಣೆಯ ಕಾಲದವರೆಗೆ ಮಾತ್ರ ಇರಬೇಕಾದುವು.
11 ಆದರೆ ಕ್ರಿಸ್ತಯೇಸು ಈಗಾಗಲೇ ಪ್ರಧಾನ ಯಾಜಕರಾಗಿ ಬಂದಿದ್ದಾರೆ. ಅವರು ಅನುಗ್ರಹಿಸುವ
ಸತ್ಫಲಗಳು ಈಗಾಗಲೇ ನಮಗೆ ದೊರೆತಿವೆ. ಅವರು ಸೇವೆ ಸಲ್ಲಿಸುತ್ತಿರುವ ಗುಡಾರವು ಹಿಂದಿನವುಗಳಿಗಿಂತ
ಶ್ರೇಷ್ಠವಾದುದು ಮತ್ತು ಪರಿಪೂರ್ಣವಾದುದು. ಇದು ಕೈಯಿಂದ ಕಟ್ಟಿದ್ದಲ್ಲ, ಇಹಲೋಕದ ಸೃಷ್ಟಿಗೆ
ಸಂಬಂಧಪಟ್ಟಿದ್ದಲ್ಲ. [12]ಇಂಥ ಗರ್ಭಗುಡಿಯನ್ನು ಅವರು ಒಮ್ಮೆಗೇ ಶಾಶ್ವತವಾಗಿ ಪ್ರವೇಶಿಸಿದ್ದಾರೆ. ಹೋತಗಳ
ಅಥವಾ ಹೋರಿಕರುಗಳ ರಕ್ತವನ್ನು ತೆಗೆದುಕೊಂಡು ಅವರು ಪ್ರವೇಶಿಸಲಿಲ್ಲ. ತಮ್ಮ ಸ್ವಂತ ರಕ್ತವನ್ನೇ
ತೆಗೆದುಕೊಂಡು ಪ್ರವೇಶಿಸಿ ನಮಗೆ ಶಾಶ್ವತ ಜೀವೋದ್ಧಾರವು ದೊರಕುವಂತೆ ಮಾಡಿದ್ದಾರೆ.
[13]ಹೋತಹೋರಿಗಳ ರಕ್ತವನ್ನೂ ಯಜ್ಞಪಶುಗಳ ಬೂದಿಯನ್ನೂ ಮಲಿನರಾದವರ ಮೇಲೆ ಚಿಮುಕಿಸುವುದರ
ಮೂಲಕ ಶಾರೀರಿಕ ಮೈಲಿಗೆಯನ್ನು ಹೋಗಲಾಡಿಸಿ ಅವರನ್ನು ಪರಿಶುದ್ಧಗೊಳಿಸಬಹುದಾದರೆ,
[14]ಯೇಸುವಿನ ರಕ್ತವು ಮತ್ತಷ್ಟು ಹೆಚ್ಚಾಗಿ ನಮ್ಮನ್ನು ಪರಿಶುದ್ಧಗೊಳಿಸುತ್ತದಲ್ಲವೇ? ನಿತ್ಯಾತ್ಮದ ಮೂಲಕ
ಅವರು ತಮ್ಮನ್ನೇ ನಿಷ್ಕಳಂಕ ಬಲಿಯಾಗಿ ದೇವರಿಗೆ ಸಮರ್ಪಿಸಿದ್ದಾರೆ; ನಾವು ಜೀವಸ್ವರೂಪರಾದ
ದೇವರನ್ನು ಆರಾಧಿಸುವಂತೆ, ಜಡ ಕರ್ಮಗಳಿಂದ ನಮ್ಮನ್ನು ಬಿಡುಗಡೆಮಾಡಿ ನಮ್ಮ ಅಂತರಂಗವನ್ನು
ಪರಿಶುದ್ಧಗೊಳಿಸುತ್ತಾರೆ.
15 ಈ ಕಾರಣ, ಯೇಸು ಹೊಸ ಒಡಂಬಡಿಕೆಯನ್ನು ಏರ್ಪಡಿಸಿದ ಮಧ್ಯಸ್ಥರಾಗಿದ್ದಾರೆ. ದೈವಕರೆ
ಹೊಂದಿದವರು ದೇವರು ವಾಗ್ದಾನ ಮಾಡಿದ ಅಮರ ಸೌಭಾಗ್ಯವನ್ನು ಬಾಧ್ಯವಾಗಿ ಪಡೆಯುವಂತೆ ಈ
ಒಡಂಬಡಿಕೆಯನ್ನು ಏರ್ಪಡಿಸಲಾಯಿತು. ಇದು ಯೇಸುವಿನ ಮರಣದ ಮೂಲಕವೇ ಉಂಟಾಯಿತು. ಈ
ಮರಣವು ಹಳೆಯ ಒಡಂಬಡಿಕೆಯನ್ನು ಮೀರಿ ಮಾಡಿದ ಅಪರಾಧಗಳನ್ನೂ ಪರಿಹರಿಸುತ್ತದೆ.
16 ಒಂದು ಮರಣ ಶಾಸನವು ಪರಿಣಾಮಕಾರಿಯಾಗಬೇಕಾದರೆ, ಅದನ್ನು ಬರೆದಾತನು
ಸತ್ತಿದ್ದಾನೆಂಬುದು ಖಚಿತವಾಗಬೇಕು; [17]ಅವನು ಸತ್ತನಂತರ ಮಾತ್ರ ಆ ಶಾಸನವು ಕಾರ್ಯರೂಪಕ್ಕೆ
ಬರುತ್ತದೆಯೇ ಹೊರತು ಅವನು ಜೀವದಿಂದ ಇರುವಾಗ ಅಲ್ಲ. [18]ಆದ್ದರಿಂದಲೇ, ಮೊದಲನೆಯ
ಒಡಂಬಡಿಕೆ ಕೂಡ ರಕ್ತಧಾರೆ ಇಲ್ಲದೆ ಪ್ರತಿಷ್ಠಾಪನೆಗೊಳ್ಳಲಿಲ್ಲ. [19]ಮೋಶೆ ಧರ್ಮಶಾಸ್ತ್ರದ ಆಜ್ಞೆಗಳನ್ನೆಲ್ಲ ಸಾರಿ
ಹೇಳಿ, ಹೋತ ಹಾಗೂ ಹೋರಿಕರುಗಳ ರಕ್ತವನ್ನು ತೆಗೆದುಕೊಂಡು ಅದಕ್ಕೆ ನೀರು ಬೆರೆಸಿದನು; ಅದನ್ನು
ಕೆಂಪು ಉಣ್ಣೆಯ ನೂಲಿನಿಂದ ಕಟ್ಟಿದ ಹಿಸ್ಸೋಪ್ ಕಡ್ಡಿಗಳಿಂದ ಪವಿತ್ರಗ್ರಂಥದ ಮೇಲೂ ಜನರ ಮೇಲೂ
ಚಿಮುಕಿಸಿದನು. [20]ಹೀಗೆ ಚಿಮುಕಿಸುವಾಗ, "ದೇವರು ನಿಮಗೆ ಆಜ್ಞಾಪಿಸಿರುವ ಒಡಂಬಡಿಕೆಯ ರಕ್ತವಿದು,"
ಎಂದು ಹೇಳಿದನು. [21]ಅಂತೆಯೇ ಗುಡಾರದ ಮೇಲೂ ದೇವಾರಾಧನೆಗೆ ಬೇಕಾದ ಎಲ್ಲಾ
ಪೂಜಾಸಾಮಗ್ರಿಗಳ ಮೇಲೂ ಆ ರಕ್ತವನ್ನು ಚಿಮುಕಿಸಿದನು. [22]ಎಂದೇ, ಧರ್ಮಶಾಸ್ತ್ರದ ಪ್ರಕಾರ ಹೆಚ್ಚು
ಕಡಿಮೆ ಎಲ್ಲವೂ ರಕ್ತದಿಂದಲೇ ಶುದ್ಧೀಕರಣ ಹೊಂದುತ್ತವೆ. ರಕ್ತಧಾರೆ ಇಲ್ಲದೆ ಪಾಪಪರಿಹಾರವಿಲ್ಲ.

## ಪಾಪ ನಿವಾರಕ ಕ್ರಿಸ್ತ ಬಲಿ

23 ಸ್ವರ್ಗೀಯವಾದವುಗಳ ಛಾಯೆಯಂತೆ ಇರುವ ಈ ವಸ್ತುಗಳೇ ಈ ಪ್ರಕಾರ ಶುದ್ಧೀಕರಣ
ಹೊಂದಬೇಕಾಗಿತ್ತಾದರೆ, ನಿಜವಾಗಿ ಸ್ವರ್ಗೀಯವಾದವುಗಳ ಶುದ್ದೀಕರಣಕ್ಕೆ ಮತ್ತಷ್ಟು ಶ್ರೇಷ್ಠವಾದ ಬಲಿಗಳು
ಬೇಕಾಗಿತ್ತು. 24ಕ್ರಿಸ್ತಯೇಸು ಪ್ರವೇಶಿಸಿದ್ದು ನೈಜದೇವಾಲಯದ ಛಾಯೆಯಂತಿರುವ ಮಾನವನಿರ್ಮಿತ
ಗರ್ಭಗುಡಿಯನ್ನಲ್ಲ, ನಮ್ಮ ಪರವಾಗಿ ದೇವರ ಸಮ್ಮುಖದಲ್ಲಿ ಉಪಸ್ಥಿತರಾಗಲು ಸಾಕ್ಷಾತ್ ಸ್ವರ್ಗವನ್ನೇ
ಅವರು ಪ್ರವೇಶಿಸಿದರು. 25ಪ್ರಧಾನ ಯಾಜಕನು ಪ್ರತಿವರ್ಷವೂ ಪ್ರಾಣಿಗಳ ರಕ್ತವನ್ನು ತೆಗೆದುಕೊಂಡು
ಗರ್ಭಗುಡಿಯನ್ನು ಪ್ರವೇಶಿಸುವಂತೆ ಯೇಸು ಪ್ರವೇಶಿಸಲಿಲ್ಲ. ಅವರು ಸ್ವರ್ಗವನ್ನು ಪ್ರವೇಶಿಸಿದ್ದು ಪದೇಪದೇ
ತಮ್ಮನ್ನು ಸಮರ್ಪಿಸಿಕೊಳ್ಳುವುದಕ್ಕೂ ಅಲ್ಲ. 26ಹಾಗೆ ಸಮರ್ಪಿಸಬೇಕಾಗಿದ್ದ ಪಕ್ಷದಲ್ಲಿ ಲೋಕಾದಿಯಿಂದಲೂ
ಅವರು ಅನೇಕ ಸಾರಿ ಮರಣ ಯಾತನೆಯನ್ನು ಅನುಭವಿಸಬೇಕಾಗಿ ಬರುತ್ತಿತ್ತು; ಅದಕ್ಕೆ ಬದಲಾಗಿ
ಯುಗಾಂತ್ಯವಾದ ಈ ಕಾಲದಲ್ಲಿ, ಪಾಪ ನಿವಾರಣೆ ಮಾಡಬೇಕೆಂಬ ಉದ್ದೇಶದಿಂದ ಒಮ್ಮೆಗೇ ತಮ್ಮನ್ನು
ತಾವೇ ಬಲಿಯಾಗಿ ಸಮರ್ಪಿಸಿಕೊಳ್ಳಲೆಂದು ಯೇಸು ಪ್ರತ್ಯಕ್ಷರಾದರು. 27ಪ್ರತಿಯೊಬ್ಬ ಮಾನವನು
ಸಾಯುವುದು ಒಂದೇ ಸಾರಿ. ಅನಂತರ ಅವನು ನ್ಯಾಯತೀರ್ಪಿಗೆ ಗುರಿಯಾಗಬೇಕು. 28ಹಾಗೆಯೇ, ಎಲ್ಲಾ
ಮಾನವರ ಪಾಪಗಳನ್ನು ಹೊತ್ತು ಹೋಗಲಾಡಿಸಲು ಕ್ರಿಸ್ತಯೇಸು ಒಮ್ಮೆಗೇ ಎಲ್ಲಾ ಕಾಲಕ್ಕೂ ತಮ್ಮನ್ನೇ
ಬಲಿಯಾಗಿ ಸಮರ್ಪಿಸಿಕೊಂಡರು. ಅವರು ಮತ್ತೆ ಪ್ರತ್ಯಕ್ಷರಾಗುವರು; ಪಾಪನಿವಾರಣೆ ಮಾಡಲೆಂದು ಅಲ್ಲ,
ತಮ್ಮನ್ನು ನಂಬಿ ನಿರೀಕ್ಷಿಸಿಕೊಂಡಿರುವವರನ್ನು ಜೀವೋದ್ಧಾರ ಮಾಡಲೆಂದು.

**10** ಧರ್ಮಶಾಸ್ತ್ರವು ಬರಲಿದ್ದ ಸೌಭಾಗ್ಯದ ಛಾಯೆಯೇ ಹೊರತು ಅದರ ನಿಜಸ್ವರೂಪವಲ್ಲ.
ವರ್ಷವರ್ಷವೂ ನಿರಂತರವಾಗಿ ಅದೇ ಬಲಿಗಳು ಅರ್ಪಿತವಾಗುತ್ತಿವೆ. ಹೀಗಿರುವಲ್ಲಿ, ದೇವರನ್ನು ಅರಸಿ
ಬರುತ್ತಿರುವವರನ್ನು ಇಂಥ ಬಲಿಗಳಿಂದ ಸಿದ್ಧಿಗೆ ತರಲು ಹೇಗೆತಾನೆ ಸಾಧ್ಯ? 2ಹಾಗೆ ಸಿದ್ಧಿಗೆ ತರಲು
ಸಾಧ್ಯವಿದ್ದಿದ್ದರೆ ಬಲಿಯರ್ಪಣೆಯು ಎಂದೋ ನಿಂತು ಹೋಗುತ್ತಿತ್ತು. ಏಕೆಂದರೆ, ಆಗ ಆರಾಧಕರು ಒಮ್ಮೆಗೇ
ಶುದ್ಧಿಹೊಂದಿ ತಾವು ಪಾಪಿಗಳೆಂಬ ಮನವರಿಕೆಯೇ ಇಲ್ಲದೆ ಇರುತ್ತಿದ್ದರು. 3ಬದಲಿಗೆ, ಪ್ರತಿ ವರ್ಷವೂ
ಸಮರ್ಪಿಸಲಾಗುವ ಬಲಿಯರ್ಪಣೆಗಳು ಪಾಪನಿವಾರಣೆ ಆಗದ್ದನ್ನು ಜ್ಞಾಪಕಕ್ಕೆ ತರುತ್ತವೆ. 4ಏಕೆಂದರೆ,
ಹೋತ, ಹೋರಿಗಳ ರಕ್ತದಿಂದ ಪಾಪನಿವಾರಣೆ ಅಸಾಧ್ಯ.

5 ಆದ್ದರಿಂದಲೇ ಭೂಲೋಕಕ್ಕೆ ಬರಲಿದ್ದ
ಕ್ರಿಸ್ತಯೇಸು ದೇವರಿಗೆ ಇಂತೆಂದರು:
"ಬಲಿಯರ್ಪಣೆಗಳೂ ಕಾಣಿಕೆಗಳೂ ನಿಮಗೆ
ಬೇಡವಾದವು
ಎಂದೇ ಅಣಿಮಾಡಿ ಕೊಟ್ಟಿರಿ ನನಗೆ
ದೇಹವೊಂದನು.
6 ಸರ್ವಾಂಗ ಹೋಮಗಳೂ
ಪಾಪಪರಿಹಾರಕ ಬಲಿಗಳೂ
ನಿಮಗೆ ತರಲಿಲ್ಲ ತೃಪ್ತಿಯನು.
7 ಆಗ ಇಂತೆಂದೆ ನಾನು:
ಗ್ರಂಥದ ಸುರುಳಿಯಲಿ ನನ್ನನ್ನು
ಕುರಿತು ಬರೆದಿರುವಂತೆ,
ಓ ದೇವಾ, ಇಗೋ ನಾ ಬಂದೆ
ನಿನ್ನ ಚಿತ್ತವನು ನೆರವೇರಿಸಲೆಂದೇ."

8ಧರ್ಮಶಾಸ್ತ್ರದ ವಿಧಿಗನುಸಾರ ಅರ್ಪಿಸಲಾಗುತ್ತಿದ್ದುವಾದರೂ “ಬಲಿಯರ್ಪಣೆಗಳು, ಕಾಣಿಕೆಗಳು,
ದಹನಬಲಿಗಳು ಮತ್ತು ಪಾಪಪರಿಹಾರಕ ಬಲಿಗಳು ನಿಮಗೆ ಬೇಡವಾದವು; ಇವು ಯಾವುವೂ ನಿಮಗೆ
ತರಲಿಲ್ಲ ತೃಪ್ತಿಯನು,” ಎಂದು ಮೊದಲು ಹೇಳುತ್ತಾರೆ. 9ಅನಂತರ, “ಇಗೋ, ನಾ ಬಂದೆ, ನಿಮ್ಮ ಚಿತ್ತವನ್ನು
ನೆರವೇರಿಸಲೆಂದೇ,” ಎನ್ನುತ್ತಾರೆ. ಹೀಗೆ ಹೊಸದನ್ನು ಸ್ಥಾಪಿಸಲು ಹಳೆಯದನ್ನು ರದ್ದುಮಾಡಿದ್ದಾರೆ.
10ಯೇಸುಕ್ರಿಸ್ತರು ಒಮ್ಮೆಗೇ ಎಲ್ಲಾ ಕಾಲಕ್ಕೂ ತಮ್ಮ ದೇಹವನ್ನು ಸಮರ್ಪಿಸಿ, ದೇವರ ಚಿತ್ತವನ್ನು
ನೆರವೇರಿಸಿದ್ದರಿಂದಲೇ ನಾವು ಪುನೀತರಾಗಿದ್ದೇವೆ.

11 ಪ್ರತಿಯೊಬ್ಬ ಯಾಜಕನು ಅನುದಿನವೂ ತನ್ನ ಸೇವೆಯನ್ನು ನಿರ್ವಹಿಸುತ್ತಾನೆ. ಆದರೆ ಇವುಗಳಿಂದ
ಎಂದಿಗೂ ಪಾಪನಿವಾರಣೆ ಆಗದು. 12ಕ್ರಿಸ್ತಯೇಸು ಪಾಪನಿವಾರಣೆಗೆಂದು ಎಲ್ಲಾ ಕಾಲಕ್ಕೂ ಏಕೈಕ
ಬಲಿಯನ್ನು ಅರ್ಪಿಸಿ ದೇವರ ಬಲಪಾರ್ಶ್ವದಲ್ಲಿ ಆಸೀನರಾಗಿದ್ದಾರೆ. 13ಅವರ ಶತ್ರುಗಳು ತಮ್ಮ ಕಾಲಡಿಗೆ
ಬರುವತನಕ ಅಲ್ಲೇ ಕಾದಿರುತ್ತಾರೆ. 14ತಾವು ಪುನೀತಗೊಳಿಸಿದವರನ್ನು ಒಂದೇ ಒಂದು
ಬಲಿಯರ್ಪಣೆಯಿಂದ ಯೇಸು ನಿರಂತರ ಸಿದ್ಧಿಗೆ ತಂದಿದ್ದಾರೆ.

15 ಇದನ್ನು ಕುರಿತು ಪವಿತ್ರಾತ್ಮರು ಕೂಡ ನಮಗೆ ಸಾಕ್ಷಿಕೊಡುತ್ತಾರೆ:

16 “ಆ ದಿನಗಳು ಬಂದಮೇಲೆ ನಾನು ಅವರೊಡನೆ
ಮಾಡಿಕೊಳ್ಳುವ ಒಡಂಬಡಿಕೆ ಹೀಗಿರುವುದು:
ನನ್ನ ಆಜ್ಞೆಗಳನ್ನು ಅವರ ಹೃದಯದಲ್ಲಿ
ನಾಟಿಸುವೆನು;
ಅವರ ಮನದಲ್ಲಿ ಬರೆಯುವೆನು,”

ಎಂದು ಹೇಳಿದ ನಂತರವೇ, 17“ಅವರ ಪಾಪಗಳನ್ನೂ ತಪ್ಪುನೆಪ್ಪುಗಳನ್ನೂ ನೆನಪಿಗೆ ತಂದುಕೊಳ್ಳೆನು,”
ಎಂದಿದ್ದಾರೆ. 18ಪಾಪಗಳ ಕ್ಷಮಾಪಣೆಯಾದ ಬಳಿಕ ಪಾಪಪರಿಹಾರಕ ಬಲಿಯ ಅವಶ್ಯಕತೆ ಇಲ್ಲ.

### ದೇವರ ಸಾನ್ನಿಧ್ಯವನ್ನು ಸೇರೋಣ

19 ಹೀಗಿರುವಲ್ಲಿ, ಪ್ರಿಯ ಸಹೋದರರೇ, ಯೇಸುಸ್ವಾಮಿ ತಮ್ಮ ದೇಹವೆಂಬ ತೆರೆಯ ಮೂಲಕ
ನಮಗೆ ಹೊಸದಾದ ಸಜ್ಜೀವ ಮಾರ್ಗವನ್ನು ತೆರೆದಿಟ್ಟಿದ್ದಾರೆ. 20ಅದರ ಮೂಲಕ ಗರ್ಭಗುಡಿಯನ್ನು
ಧೈರ್ಯದಿಂದ ಪ್ರವೇಶಿಸುವ ಹಕ್ಕು ಅವರ ರಕ್ತಧಾರೆಯಿಂದಲೇ ನಮಗೆ ದೊರೆತಿದೆ. 21ದೇವರ ಮನೆತನದ
ಮೇಲೆ ಅಧಿಕಾರವಿರುವ ಶ್ರೇಷ್ಠ ಯಾಜಕ ನಮಗಿದ್ದಾರೆ. 22ಆದಕಾರಣ, ನಾವು ಕೆಟ್ಟ ಮನಸ್ಸಾಕ್ಷಿಯನ್ನು
ತೊರೆದ ಹೃದಯದಿಂದಲೂ ಪುಣ್ಯಜಲದಿಂದ ತೊಳೆದ ದೇಹದಿಂದಲೂ ಕೂಡಿದವರಾಗಿ ಶುದ್ಧ
ಅಂತರಂಗದಿಂದಲೂ ಪೂರ್ಣವಿಶ್ವಾಸದಿಂದಲೂ ದೇವರ ಬಳಿಗೆ ಸಾಗೋಣ. 23ಕೊಟ್ಟ ಮಾತನ್ನು ದೇವರು
ಮೀರುವುದಿಲ್ಲ. ಆದ್ದರಿಂದ ನಾವು ನಿವೇದಿಸುವ ನಂಬಿಕೆ ನಿರೀಕ್ಷೆಯಲ್ಲಿ ಚಂಚಲರಾಗದೆ ಸದೃಢರಾಗಿರೋಣ.
24ಪರಸ್ಪರ ಹಿತಚಿಂತಕರಾಗಿರೋಣ; ಪ್ರೀತಿಸಬೇಕು, ಒಳಿತನ್ನು ಮಾಡಬೇಕು ಎಂದು ಒಬ್ಬರನ್ನೊಬ್ಬರು
ಹುರಿದುಂಬಿಸೋಣ. 25ಸಭೆ ಸೇರುವ ರೂಢಿಯನ್ನು ಕೆಲವರು ಕೈಬಿಟ್ಟಿದ್ದಾರೆ. ನಾವು ಹಾಗೆ ಮಾಡದಿರೋಣ.
ನಿಮಗೆ ತಿಳಿದಿರುವಂತೆ ಪ್ರಭು ಪ್ರತ್ಯಕ್ಷರಾಗುವ ದಿನವು ಸಮೀಪಿಸುತ್ತಿರುವುದರಿಂದ ಮತ್ತಷ್ಟು ಹೆಚ್ಚಾಗಿ
ಒಬ್ಬರನ್ನೊಬ್ಬರು ಪ್ರೋತ್ಸಾಹಿಸೋಣ.

26 ನಾವು ಸತ್ಯವನ್ನು ಅರಿತವರಾದ ಮೇಲೂ ಬೇಕುಬೇಕಾಗಿ ಪಾಪಮಾಡುತ್ತಲೇ ಇದ್ದರೆ,
ಪಾಪಪರಿಹಾರಕ್ಕೆ ಇನ್ನು ನಮಗೆ ಬೇರೆ ಯಾವ ಬಲಿಯೂ ಇರುವುದಿಲ್ಲ; 27ಬದಲಿಗೆ, ಅತ್ಯಂತ ಭಯದಿಂದ
ಎದುರು ನೋಡಬೇಕಾದ ದಂಡನಾತೀರ್ಪು ಹಾಗೂ ದೇವರ ಶತ್ರುಗಳನ್ನು ದಹಿಸುವ ಉಗ್ರ ಕೋಪಾಗ್ನಿ –
ಇವುಗಳನ್ನು ಮಾತ್ರ ನಮಗೆ ಉಳಿದಿರುತ್ತವೆ. 28ಮೋಶೆಯ ಆಜ್ಞಾವಿಧಿಗಳನ್ನು ಉಲ್ಲಂಘಿಸಿದವನು, ಇಬ್ಬರು
ಅಥವಾ ಮೂವರು ಸಾಕ್ಷಿಗಳು ನೀಡುವ ಸಾಕ್ಷ್ಯದ ಆಧಾರದ ಮೇಲೆ ಕರುಣೆಯಿಲ್ಲದೆ ಮರಣದಂಡನೆಗೆ
ಗುರಿ ಆಗುತ್ತಾನೆ. 29ಹೀಗಿರುವಲ್ಲಿ, ದೇವರ ಪುತ್ರನನ್ನು ತುಚ್ಛೀಕರಿಸುವವನೂ ತನ್ನನ್ನು ಶುದ್ಧೀಕರಿಸಿದ ಹಾಗು
ಒಡಂಬಡಿಕೆಯನ್ನು ಸ್ಥಿರಪಡಿಸುವ ರಕ್ತವನ್ನು ತೃಣೀಕರಿಸುವವನೂ ವರಪ್ರಸಾದವನ್ನು ತರುವ ಪವಿತ್ರಾತ್ಮ
ಅವರನ್ನು ತಿರಸ್ಕರಿಸುವವನೂ ಎಂಥಾ ಕ್ರೂರದಂಡನೆಗೆ ಗುರಿ ಆಗುತ್ತಾನೆಂದು ನೀವೇ ಯೋಚಿಸಿನೋಡಿ!

[30]“ಮುಯ್ಯಿಗೆ ಮುಯ್ಯಿ ತೀರಿಸುವುದು ನನ್ನ ಕೆಲಸ; ನಾನೇ ಪ್ರತೀಕಾರವನ್ನು ಸಲ್ಲಿಸುವೆನು,” ಎಂದು
ಹೇಳಿದವರು ಯಾರೆಂದು ಬಲ್ಲೆವು. ಅಲ್ಲದೆ, “ಸರ್ವೇಶ್ವರ ತಮ್ಮ ಪ್ರಜೆಗಳಿಗೆ ನ್ಯಾಯ ತೀರ್ಪನ್ನು
ನೀಡುವರು,” ಎಂದೂ ಹೇಳಲಾಗಿದೆ. [31]ಜೀವಸ್ವರೂಪರಾದ ದೇವರ ಕೈಯಲ್ಲಿ ಸಿಕ್ಕಿ ಬೀಳುವುದು ಅದೆಷ್ಟು
ಭಯಂಕರ!

32 ನಿಮ್ಮ ಹಿಂದಿನ ದಿನಗಳನ್ನು ನೆನಪಿಗೆ ತಂದುಕೊಳ್ಳಿ: ನಿಮಗೆ ಜ್ಞಾನೋದಯವಾದ ತರುವಾಯ,
ಕಷ್ಟಸಂಕಟಗಳಿಂದ ಕೂಡಿದ ಹೋರಾಟವನ್ನು ಎದುರಿಸಿದಿರಿ! [33]ಕೆಲವೊಮ್ಮೆ ಬಹಿರಂಗವಾಗಿ
ಹಿಂಸೆಬಾಧೆಗಳಿಗೂ ನಿಂದೆ ಅವಮಾನಗಳಿಗೂ ಗುರಿಯಾದಿರಿ; ಮತ್ತೆ ಕೆಲವೊಮ್ಮೆ ನಿಮ್ಮಂತೆ
ಸಂಕಟಪಡುವವರ ಸಂಗಡ ಸಹಭಾಗಿಗಳಾದಿರಿ; [34]ಸೆರೆಯಾಳುಗಳಿಗೆ ಸಂತಾಪ ತೋರಿಸಿದಿರಿ, ನಿಮ್ಮ
ಸೊತ್ತನ್ನು ಸುಲಿಗೆ ಮಾಡಿದಾಗ ಸಂತೋಷದಿಂದ ಬಿಟ್ಟುಕೊಟ್ಟಿರಿ. ಏಕೆಂದರೆ, ಇದಕ್ಕೂ ಶ್ರೇಷ್ಠವಾದ ಹಾಗೂ
ಶಾಶ್ವತವಾದ ಸೊತ್ತು ನಿಮಗಿದೆಯೆಂದು ಚೆನ್ನಾಗಿ ಅರಿತಿದ್ದಿರಿ. [35]ಆ ದೃಢ ನಂಬಿಕೆಯನ್ನು ಕಳೆದುಕೊಳ್ಳಬೇಡಿ;
ಅದರ ಪ್ರತಿಫಲ ಮಹತ್ತಾದುದು. [36]ದೇವರ ಚಿತ್ತವನ್ನು ನೆರವೇರಿಸಿ, ಅವರು ವಾಗ್ದಾನ ಮಾಡಿರುವುದನ್ನು
ಪಡೆದುಕೊಳ್ಳುವಂತೆ, ನೀವು ದೃಢಮನಸ್ಕರಾಗಿರಬೇಕು.

[37] ಏಕೆಂದರೆ:

“ಇನ್ನು ಅಲ್ಪ, ಅತ್ಯಲ್ಪ ಕಾಲದಲ್ಲೇ
ಬರುವಾತನು ಬಂದೇ ಬರುವನು,
ವಿಳಂಬಮಾಡನು.

[38] ಸಜ್ಜನರಾದ ನನ್ನ ಭಕ್ತರು
ವಿಶ್ವಾಸದಿಂದಲೇ ಬಾಳುವರು
ಅವರು ಹಿಂಜರಿದರಾದರೆ
ಮೆಚ್ಚೆನು ನಾನವರನು,”

ಎನ್ನುತ್ತದೆ ಪವಿತ್ರಗ್ರಂಥ. [39]ಆದರೆ ನಾವು ಹಿಮ್ಮೆಟ್ಟಿ ಹಾಳಾಗುವ ಜನರಲ್ಲ; ವಿಶ್ವಾಸವುಳ್ಳವರಾಗಿ
ಜೀವೋದ್ಧಾರವನ್ನು ಪಡೆಯುವವರು.

## ವಿಶ್ವಾಸದಿಂದಲೇ ಸಿದ್ಧಿ

**11** ವಿಶ್ವಾಸವೆಂಬುದು ನಾವು ನಿರೀಕ್ಷಿಸುವಂಥವುಗಳು ನಮಗೆ ದೊರಕುತ್ತವೆ ಎಂಬ ದೃಢನಂಬಿಕೆ ಹಾಗು
ಕಣ್ಣಿಗೆ ಕಾಣದಂಥವುಗಳು ನಿಶ್ಚಯವಾದವು ಎಂಬ ನಿಲುವು ಆಗಿದೆ. [2]ನಮ್ಮ ಪೂರ್ವಜರು
ದೈವಸಮ್ಮತಿಯನ್ನು ಪಡೆದದ್ದು ವಿಶ್ವಾಸದಿಂದಲೇ; [3]ವಿಶ್ವವು ದೇವರ ವಾಣಿಯಿಂದ ಉಂಟಾಯಿತು
ಎಂಬುದನ್ನು ಮತ್ತು ಗೋಚರವಾದವುಗಳು ಅಗೋಚರವಾದವುಗಳಿಂದ ಉಂಟಾದವು ಎಂಬುದನ್ನು
ವಿಶ್ವಾಸದಿಂದಲೇ ತಿಳಿಯುತ್ತೇವೆ.

4 ವಿಶ್ವಾಸವಿದ್ದುದರಿಂದಲೇ ಹೇಬೆಲನು ಕಾಯಿನನಿಗಿಂತ ಉತ್ತಮವಾದ ಬಲಿಯನ್ನು ದೇವರಿಗೆ ಸಮರ್ಪಿಸಿದನು. ವಿಶ್ವಾಸದಿಂದಲೇ ತಾನು ಸತ್ಪುರುಷನೆಂದು ಸನ್ಮಾನಿತನಾದನು. ಅವನ ಕಾಣಿಕೆ ತಮಗೆ ಸ್ವೀಕೃತವಾಯಿತೆಂದು ದೇವರೇ ಸಾದರಪಡಿಸಿದರು. ಅವನು ಮೃತನಾಗಿದ್ದರೂ ಅವನ ವಿಶ್ವಾಸದ ಮೂಲಕ ಇಂದಿಗೂ ಮಾತನಾಡುತ್ತಿದ್ದಾನೆ.

5 ವಿಶ್ವಾಸವಿದ್ದುದರಿಂದಲೇ ಹನೋಕನು ಮೃತ್ಯುವಿಗೆ ತುತ್ತಾಗದಂತೆ ದೇವರ ಬಳಿಗೆ ಒಯ್ಯಲ್ಪಟ್ಟನು.
ದೇವರು ಆತನನ್ನು ಕರೆದುಕೊಂಡಿದ್ದರಿಂದ ಆತನು ಯಾರಿಗೂ ಕಾಣಸಿಗಲಿಲ್ಲ. ಆತನು ಹೀಗೆ
ಒಯ್ಯಲ್ಪಡುವುದಕ್ಕೆ ಮುಂಚೆ ದೇವರಿಗೆ ಮೆಚ್ಚುಗೆಯಾಗಿದ್ದನು ಎಂಬುದಕ್ಕೆ ಸಾಕ್ಷ್ಯಾಧಾರವಿದೆ. [6]ವಿಶ್ವಾಸವಿಲ್ಲದೆ
ದೇವರ ಮೆಚ್ಚುಗೆಗೆ ಪಾತ್ರರಾಗಲು ಯಾರಿಂದಲೂ ಸಾಧ್ಯವಿಲ್ಲ. ದೇವರ ಬಳಿಗೆ ಸಾಗುವವರು, ಅವರ
ಅಸ್ತಿತ್ವವನ್ನು ವಿಶ್ವಾಸಿಸಬೇಕು; ಅವರನ್ನು ಅರಸುವವರಿಗೆ ತಕ್ಕ ಪ್ರತಿಫಲ ಸಿಗುವುದೆಂದು ನಂಬಬೇಕು.

7 ವಿಶ್ವಾಸವಿದ್ದುದರಿಂದಲೇ ನೋವನು ಕಾಣದೆ ಇದ್ದ ತನ್ನ ಭವಿಷ್ಯದ ಬಗ್ಗೆ ದೇವರಿಂದ ಮುನ್ನೆಚ್ಚರಿಕೆ
ಪಡೆದಾಗ ಅದನ್ನು ಲಕ್ಷ್ಯಕ್ಕೆ ತಂದುಕೊಂಡು ಕುಟುಂಬವನ್ನು ರಕ್ಷಿಸಿಕೊಳ್ಳಲು ನಾವೆಯೊಂದನ್ನು
ನಿರ್ಮಿಸಿದನು. ಇಡೀ ಜಗತ್ತೇ ದಂಡನೆಗೆ ಗುರಿಯಾಯಿತು. ನೋವನಾದರೋ ತನ್ನ ವಿಶ್ವಾಸದ ಫಲವಾಗಿ
ಸತ್ಸಂಬಂಧಕ್ಕೆ ಬಾಧ್ಯಸ್ಥನಾದನು.

8 ಅಬ್ರಹಾಮನು ದೇವರ ಕರೆಗೆ ಓಗೊಡುವುದಕ್ಕೂ ವಿಶ್ವಾಸವೇ ಕಾರಣವಾಗಿತ್ತು. ಆತನು ಆ
ಕರೆಗನುಸಾರವಾಗಿ ತಾನು ಬಾಧ್ಯವಾಗಿ ಹೊಂದಬೇಕಾಗಿದ್ದ ನಾಡಿಗೆ ಹೊರಟನು. ತಾನು ಸೇರಬೇಕಾಗಿದ್ದ
ಸ್ಥಳ ಯಾವುದೆಂದು ತಿಳಿಯದಿದ್ದರೂ ಸ್ವದೇಶವನ್ನು ಬಿಟ್ಟು ತೆರಳಿದನು. 9ದೇವರು ವಾಗ್ದಾನ ಮಾಡಿದ
ನಾಡಿಗೆ ಬಂದಾಗಲೂ ಆತನು ಅದೇ ವಿಶ್ವಾಸದ ನಿಮಿತ್ತ ಒಬ್ಬ ಅನ್ಯದೇಶೀಯನಂತೆ ಬಾಳಿದನು.
ಡೇರೆಗಳಲ್ಲಿದ್ದುಕೊಂಡು ಒಬ್ಬ ಪ್ರವಾಸಿಗನಂತೆ ಜೀವಿಸಿದನು. ಅದೇ ವಾಗ್ದಾನಕ್ಕೆ ಸಹಬಾಧ್ಯಸ್ಥರಾದ
ಇಸಾಕನೂ ಯಕೋಬನೂ ಅವನಂತೆಯೇ ಡೇರೆಗಳಲ್ಲಿ ವಾಸಿಸಿದರು. 10ಏಕೆಂದರೆ, ಶಾಶ್ವತವಾದ
ಅಸ್ತಿವಾರವುಳ್ಳ ಅಂದರೆ, ದೇವರೇ ನಿಯೋಜಿಸಿ ನಿರ್ಮಿಸಿದ ನಗರವನ್ನು ಆತನು ಎದುರು ನೋಡುತ್ತಿದ್ದನು.

11 ಇದಲ್ಲದೆ, ಪ್ರಾಯ ಮೀರಿದ ಸಾರಳು ಕೂಡ ವಿಶ್ವಾಸದ ಮೂಲಕವಾಗಿಯೇ ಗರ್ಭವತಿ ಆಗುವ
ಶಕ್ತಿಯನ್ನು ಪಡೆದಳು; ವಾಗ್ದಾನಮಾಡಿದ ದೇವರು ನಂಬಿಗಸ್ಥರು ಎಂಬ ಭರವಸೆ ಆಕೆಗಿತ್ತು. 12ಹೀಗೆ
ಮೃತಪ್ರಾಯನಾಗಿದ್ದ ಒಬ್ಬ ವ್ಯಕ್ತಿ ಆಕಾಶದ ನಕ್ಷತ್ರಗಳಂತೆಯೂ ಕಡಲ ತೀರದ ಮರಳಿನಂತೆಯೂ
ಅಸಂಖ್ಯಾತವಾದ ಸಂತತಿಗೆ ತಂದೆಯಾದನು.

13 ಇವರೆಲ್ಲರೂ ವಿಶ್ವಾಸವುಳ್ಳವರಾಗಿಯೇ ಮೃತರಾದರು. ದೇವರು ವಾಗ್ದಾನ ಮಾಡಿದವುಗಳನ್ನು
ಪಡೆಯದಿದ್ದರೂ ಅವುಗಳನ್ನು ದೂರದಿಂದಲೇ ನೋಡಿ ಸ್ವಾಗತಿಸಿ ಸಂತೋಷಪಟ್ಟರು; ತಾವು ಜಗತ್ತಿನಲ್ಲಿ
ಕೇವಲ ಪರದೇಶಿಗಳೂ ಪ್ರವಾಸಿಗರೂ ಎಂಬುದನ್ನು ಒಪ್ಪಿಕೊಂಡರು. 14ಹೀಗೆ ಒಪ್ಪಿಕೊಳ್ಳುವವರೇ
ಸ್ವದೇಶವನ್ನು ಅರಸುವವರು ಎಂಬುದನ್ನು ಸ್ಪಷ್ಟವಾಗಿ ವ್ಯಕ್ತಪಡಿಸುತ್ತಾರೆ. 15ತಾವು ಬಿಟ್ಟುಬಂದ ನಾಡಿನ ಮೇಲೆ
ಅವರು ಮನಸ್ಸಿಡಲಿಲ್ಲ, ಹಾಗಿದ್ದಿದ್ದರೆ, ಮರಳಿ ಅಲ್ಲಿಗೆ ಹೋಗುವುದಕ್ಕೆ ಅವರಿಗೆ ಅವಕಾಶ ಯಾವಾಗಲೂ
ಇರುತ್ತಿತ್ತು. 16ಆದರೆ, ಅವರು ಬಯಸಿದ್ದು ಶ್ರೇಷ್ಠವಾದ ನಾಡನ್ನು, ಅಂದರೆ ಸ್ವರ್ಗವನ್ನು. ಆದ್ದರಿಂದಲೇ
ದೇವರು, “ಅವರ ದೇವರು”, ಎಂದು ಕರೆಸಿಕೊಳ್ಳಲು ಅವಮಾನಪಡಲಿಲ್ಲ. ಅದಕ್ಕೆ ಬದಲು, ಅವರಿಗಾಗಿ
ಒಂದು ನಗರವನ್ನು ಸಜ್ಜುಗೊಳಿಸಿದ್ದಾರೆ.

17 ವಿಶ್ವಾಸವಿದ್ದುದರಿಂದಲೇ ಅಬ್ರಹಾಮನು ತಾನು ಪರಿಶೋಧಿತನಾದಾಗ ಇಸಾಕನನ್ನು ಬಲಿಯಾಗಿ
ಅರ್ಪಿಸಲು ಮುಂದೆ ಬಂದನು. 18“ಇಸಾಕನಿಂದ ಹುಟ್ಟುವವರು ನಿನ್ನ ಸಂತತಿ ಎನಿಸಿಕೊಳ್ಳುವರು,” ಎಂಬ
ವಾಗ್ದಾನವನ್ನು ಪಡೆದಿದ್ದರೂ ಅಬ್ರಹಾಮನು ತನ್ನ ಆ ಏಕಮಾತ್ರ ಪುತ್ರನನ್ನು ಬಲಿಕೊಡಲು ಹಿಂಜರಿಯಲಿಲ್ಲ.
19ಏಕೆಂದರೆ, ಸತ್ತವರನ್ನು ದೇವರು ಜೀವಕ್ಕೆ ಎಬ್ಬಿಸಬಲ್ಲರು ಎಂಬುದನ್ನು ಅಬ್ರಹಾಮನು ತಿಳಿದಿದ್ದನು.
ಅಂತೆಯೇ, ತನ್ನ ಮಗನನ್ನು ಸಾವಿನಿಂದ ಮರಳಿ ಪಡೆದನು. ಮುಂಬರಲಿರುವ ಘಟನೆಗೆ ಇದೊಂದು
ಮುನ್ಸೂಚನೆಯಾಗಿತ್ತು.

20 ವಿಶ್ವಾಸವಿದ್ದುದರಿಂದಲೇ ಇಸಾಕನು ಸಹ ಮುಂದೆ ಸಂಭವಿಸಬೇಕಾದ್ದನ್ನು ಸೂಚಿಸಿ,
ಯಕೋಬನನ್ನೂ ಏಸಾವನನ್ನೂ ಆಶೀರ್ವದಿಸಿದನು.

21 ವಿಶ್ವಾಸದಿಂದಲೇ ಯಕೋಬನು, ತಾನು ಸಾಯುವ ಸಮಯದಲ್ಲಿ ಜೋಸೆಫನ ಪ್ರತಿಯೊಬ್ಬ
ಮಗನನ್ನೂ ಆಶೀರ್ವದಿಸಿದನು; ಊರುಗೋಲಿನ ಮೇಲೆ ಬಾಗಿಕೊಂಡೇ ದೇವರನ್ನು ಆರಾಧಿಸಿದನು.

22 ವಿಶ್ವಾಸದಿಂದಲೇ ಜೋಸೆಫನು, ತಾನು ಸಾಯುವ ಗಳಿಗೆಯು ಸಮೀಪಿಸಿದಾಗ, ಇಸ್ರಯೇಲಿನ
ಜನರು ಈಜಿಪ್ಟಿನಿಂದ ಹೊರಬರುವುದನ್ನು ಸೂಚಿಸಿದನು. ಅಲ್ಲದೆ, ತನ್ನ ಶವಸಂಸ್ಕಾರದ ಬಗ್ಗೆ ಆದೇಶ
ನೀಡಿದನು.

23 ವಿಶ್ವಾಸವಿದ್ದುದರಿಂದಲೇ ಮೋಶೆ ಹುಟ್ಟಿದಾಗ ಆ ಮಗುವಿನ ಸೌಂದರ್ಯವನ್ನು ಕಂಡು,
ತಂದೆತಾಯಿಗಳು ರಾಜಾಜ್ಞೆಗೆ ಅಂಜದೆ, ಮೂರು ತಿಂಗಳವರೆಗೆ ಅದನ್ನು ಬಚ್ಚಿಟ್ಟರು.

24 ಮೋಶೆ ದೊಡ್ಡವನಾದ ಮೇಲೆ ತಾನು ಅರಸನಾದ ಫರೋಹನ ಕುಮಾರಿಯ ಪುತ್ರ ಎಂದು
ಕರೆಸಿಕೊಳ್ಳಲು ನಿರಾಕರಿಸಿದುದೂ ಸಹ ವಿಶ್ವಾಸದಿಂದಲೇ. 25ಕ್ಷಣಿಕ ಪಾಪಭೋಗಗಳನ್ನು

ಸವಿಯುವುದಕ್ಕಿಂತಲೂ ದೇವಜನರೊಂದಿಗೆ ಕಷ್ಟಕ್ಕೆ ಈಡಾಗುವುದೇ ಲೇಸೆಂದು ಆತನು ತೀರ್ಮಾನಿಸಿಕೊಂಡನು. [26]ಈಜಿಪ್ಟಿನ ಸಕಲ ಐಶ್ವರ್ಯಕ್ಕಿಂತಲೂ 'ಕ್ರಿಸ್ತ'ನಿಗೋಸ್ಕರ ನಿಂದೆಯನ್ನು ಅನುಭವಿಸುವುದು ದೊಡ್ಡ ಭಾಗ್ಯವೆಂದು ಆತನು ಎಣಿಸಿದನು. ಏಕೆಂದರೆ, ದೇವರಿಂದ ದೊರಕಲಿದ್ದ ಪ್ರತಿಫಲದ ಮೇಲೆಯೇ ಆತನ ಮನಸ್ಸು ನಾಟಿತ್ತು.

27 ವಿಶ್ವಾಸವಿದ್ದುದರಿಂದಲೇ ಆತನು ಅರಸನ ಕಡುಕೋಪಕ್ಕೂ ಅಂಜದೆ ಈಜಿಪ್ಟ್ ದೇಶವನ್ನು ಬಿಟ್ಟುಬಂದನು. ಕಣ್ಣಿಗೆ ಕಾಣದ ದೇವರನ್ನು ಕಣ್ಣಾರೆ ಕಾಣುತ್ತಿರುವನೋ ಎನ್ನುವಷ್ಟು ದೃಢಚಿತ್ತನಾಗಿ ಅವನು ಮುನ್ನಡೆದನು. [28]ಚೊಚ್ಚಲ ಮಕ್ಕಳನ್ನು ಸಂಹರಿಸುವಾತನು ಇಸ್ರಯೇಲರನ್ನು ಮುಟ್ಟದಂತೆ ರಕ್ತವನ್ನು ಚಿಮುಕಿಸಿ ಪಾಸ್ಕವನ್ನು ಆಚರಿಸುವಂತೆ ಮೋಶೆ ವಿಧಿಸಿದ್ದು ವಿಶ್ವಾಸದಿಂದಲೇ.

29 ವಿಶ್ವಾಸದಿಂದಲೇ ಇಸ್ರಯೇಲರು ಒಣನೆಲವನ್ನು ದಾಟುವಂತೆ, ಕೆಂಪು ಸಮುದ್ರವನ್ನು ದಾಟಿದರು. ಈಜಿಪ್ಟಿನವರು ಹಾಗೆಯೇ ದಾಟಲೆತ್ನಿಸಿದಾಗ ನೀರಿನ ಪಾಲಾದರು.

30 ಇಸ್ರಯೇಲರು ಏಳು ದಿನಗಳವರೆಗೆ ಜೆರಿಕೊ ಪಟ್ಟಣದ ಕೋಟೆಯನ್ನು ಪ್ರದಕ್ಷಿಣೆ ಮಾಡಿ ಬಂದ ನಂತರ ಅವು ತಮ್ಮಷ್ಟಕ್ಕೆ ತಾವೇ ಕುಸಿದು ಬಿದ್ದುದಕ್ಕೆ ಕಾರಣ ಆ ವಿಶ್ವಾಸವೇ.

31 ವಿಶ್ವಾಸವಿದ್ದುದರಿಂದಲೇ ರಹಾಬಳೆಂಬ ಜಾರಿಣಿ ಇಸ್ರಯೇಲ್ ಗೂಢಚಾರರಿಗೆ ಸೌಹಾರ್ದತೆಯಿಂದ ಆಶ್ರಯ ನೀಡಿ, ಅವಿಶ್ವಾಸಿಗಳೊಡನೆ ನಾಶವಾಗದೆ ಉಳಿದಳು.

32 ಇನ್ನೂ ಹೇಳಬೇಕೇ? ಗಿಡಿಯೋನ್, ಬಾರಾಕ್, ಸಂಸೋನ್, ಯೆಫ್ತಾಹ, ದಾವೀದ, ಸಮುವೇಲ ಇವರನ್ನೂ ಇತರ ಪ್ರವಾದಿಗಳನ್ನೂ ಕುರಿತು ಹೇಳಬೇಕಾದರೆ ನನಗೆ ಸಮಯ ಸಾಲದು. [33]ಇವರು ವಿಶ್ವಾಸದಿಂದಲೇ ರಾಜ್ಯಗಳನ್ನು ಗೆದ್ದರು; ನ್ಯಾಯನೀತಿಯಿಂದ ಆಳಿದರು; ದೇವರಿಂದ ವಾಗ್ದಾನಗಳನ್ನು ಪಡೆದರು; ಸಿಂಹಗಳ ಬಾಯನ್ನು ಬಂಧಿಸಿದರು. [34]ಅಗ್ನಿಜ್ವಾಲೆಯನ್ನು ಆರಿಸಿದರು; ಖಡ್ಗದ ಬಾಯಿಂದ ತಪ್ಪಿಸಿಕೊಂಡರು; ಬಲಹೀನರಾಗಿದ್ದರೂ ಬಲಿಷ್ಠರಾದರು; ಯುದ್ಧದಲ್ಲಿ ಪರಾಕ್ರಮಶಾಲಿಗಳಾದರು; ಶತ್ರುಗಳ ಸೈನ್ಯವನ್ನು ಸದೆಬಡಿದರು. [35]ವಿಶ್ವಾಸದಿಂದಲೇ ಮಹಿಳೆಯರು ಮೃತರಾಗಿದ್ದ ತಮ್ಮವರನ್ನು ಮರಳಿ ಜೀವಂತರಾಗಿ ಪಡೆದರು.

ಕೆಲವರು ಇದಕ್ಕಿಂತ ಶ್ರೇಷ್ಠವಾದ ಪುನರುತ್ಥಾನವನ್ನು ಪಡೆಯುವ ಉದ್ದೇಶದಿಂದ ಬಿಡುಗಡೆಯನ್ನು ನಿರಾಕರಿಸಿ ಹಿಂಸೆಬಾಧೆಗಳಿಗೆ ತುತ್ತಾಗಿ ಮರಣವನ್ನಪ್ಪಿದರು. [36]ಇನ್ನೂ ಕೆಲವರು ಹಾಸ್ಯ ಪರಿಹಾಸ್ಯ, ಏಟುಪೆಟ್ಟು, ಸೆರೆಸಂಕಲೆಗಳನ್ನು ಅನುಭವಿಸಿದರು. [37]ಮತ್ತೆ ಕೆಲವರನ್ನು ಜನರು ಕಲ್ಲೆಸೆದು ಕೊಂದರು; ಗರಗಸದಿಂದ ಸೀಳಿ ಸಾಯಿಸಿದರು; ಖಡ್ಗದಿಂದ ಕಡಿದುಹಾಕಿದರು. ಇನ್ನೂ ಕೆಲವರು ನಿರ್ಗತಿಕರಾಗಿ ಕುರಿ ಮೇಕೆಗಳ ಚರ್ಮಗಳನ್ನು ಹೊದ್ದುಕೊಂಡು ಅಲೆದಾಡಿದರು. ಬಡತನಕ್ಕೂ ಹಿಂಸೆಬಾಧೆಗಳಿಗೂ ಕಷ್ಟಸಂಕಟಗಳಿಗೂ ಈಡಾದರು; [38]ಇಂಥವರಿಗೆ ಈ ಲೋಕ ತಕ್ಕ ಸ್ಥಳವಾಗಿರಲಿಲ್ಲ. ಈ ಕಾರಣದಿಂದ, ಅವರು ಕಾಡು ಬೆಟ್ಟಗಳಲ್ಲೂ ಗುಹೆ ಕಣಿವೆಗಳಲ್ಲೂ ತಲೆಮರೆಸಿಕೊಂಡಿದ್ದರು.

12 ಇವರೆಲ್ಲರೂ ವಿಶ್ವಾಸವುಳ್ಳವರಾದುದರಿಂದಲೇ ಸಜ್ಜನರೆಂದು ಹೆಸರುವಾಸಿಯಾದರು. ಆದರೂ ದೇವರು ವಾಗ್ದಾನಮಾಡಿದ ಸತ್ಫಲಗಳನ್ನು ಸವಿಯಲಿಲ್ಲ. [40]ಏಕೆಂದರೆ ದೇವರು ನಮ್ಮೆಲ್ಲರಿಗೋಸ್ಕರ, ಶ್ರೇಷ್ಠವಾದ ಯೋಜನೆಯೊಂದನ್ನು ರೂಪಿಸಿ, ನಮ್ಮೊಡನೆಯೇ ಅಂದಿನ ವಿಶ್ವಾಸಿಗಳೂ ಸಿದ್ಧಿಗೆ ಬರಬೇಕೆಂದು ಸಂಕಲ್ಪಿಸಿದರು.

### ಶಿಸ್ತಿಗಾಗಿ ಶಿಕ್ಷೆ

**12** ಆದಕಾರಣ ಇಷ್ಟುಮಂದಿ ಸಾಕ್ಷಿಗಳು ದೊಡ್ಡ ಮೇಘದಂತೆ ನಮ್ಮ ಸುತ್ತಲೂ ಆವರಿಸಿರುವಾಗ, ನಮಗೆ ಅಡ್ಡಿಯಾಗಬಲ್ಲ ಹೊರೆಯನ್ನೂ ಅಂಟಿಕೊಳ್ಳುವ ಪಾಪವನ್ನೂ ತೆಗೆದು ಹಾಕಿ, ನಮಗಾಗಿ ನೇಮಿಸಿರುವ ಓಟದ ಸ್ಪರ್ಧೆಯಲ್ಲಿ ನಾವು ಸ್ಥಿರಚಿತ್ತದಿಂದ ಭಾಗವಹಿಸೋಣ. [2]ವಿಶ್ವಾಸವನ್ನು ಹುಟ್ಟಿಸುವ ಮತ್ತು ಅದನ್ನು ಪರಿಪೂರ್ಣಗೊಳಿಸುವ ಯೇಸುಸ್ವಾಮಿಯನ್ನು ಗುರಿಯಾಗಿಟ್ಟು ಓಡೋಣ. ಅವರು ತಮ್ಮ ಮುಂದಿಡಲಾದ

ಸೌಭಾಗ್ಯವನ್ನು ಗಳಿಸಲು ನಿಂದೆ ಅವಮಾನಗಳನ್ನು ಲೆಕ್ಕಿಸದೆ ಶಿಲುಬೆಯ ಮರಣವನ್ನು ಸಹಿಸಿಕೊಂಡರು. ಈಗಲಾದರೋ ದೇವರ ಸಿಂಹಾಸನದ ಬಲಗಡೆ ಆಸೀನರಾಗಿದ್ದಾರೆ.

3 ಪಾಪಿಗಳಿಂದ ತಮಗುಂಟಾದ ಕಠಿಣ ವಿರೋಧವನ್ನು ಯೇಸುಸ್ವಾಮಿ ಹೇಗೆ ಸಹಿಸಿಕೊಂಡರೆಂಬುದನ್ನು ಮನಸ್ಸಿನಲ್ಲಿಡಿ. ಆಗ ನೀವು ಬೇಸತ್ತು ಎದೆಗುಂದಲಾರಿರಿ. [4]ಪಾಪದ ವಿರುದ್ಧ ನೀವು ಕೈಗೊಂಡ ಹೋರಾಟದಲ್ಲಿ ನಿಮ್ಮ ರಕ್ತವನ್ನೇ ಸುರಿಸುವ ಸ್ಥಿತಿಗೆ ನೀವಿನ್ನೂ ಬಂದಿಲ್ಲ. [5]ಮಕ್ಕಳಿಗೆ ಹೇಳುವಂತೆ ದೇವರು ನಿಮಗೆ ಹೇಳಿರುವ ಎಚ್ಚರಿಕೆಯ ಮಾತನ್ನು ನೀವು ಮರೆತುಬಿಟ್ಟಿರೋ?

"ಸುಕುಮಾರಾ, ಸರ್ವೇಶ್ವರ ಕೊಡುವ
ಶಿಕ್ಷೆಯನ್ನು ತಾತ್ಸಾರ ಮಾಡದಿರು
ಅವರು ನಿನ್ನನ್ನು ದಂಡಿಸುವಾಗ
ಧೈರ್ಯಗೆಡದಿರು
6 ಸರ್ವೇಶ್ವರ ತಾವು ಪ್ರೀತಿಸುವವನನ್ನು
ಶಿಕ್ಷಿಸುವರು;
ತಮಗೆ ಮಗನೆಂದು ಬರಮಾಡಿ."

7 ಶಿಸ್ತಿಗಾಗಿ ಶಿಕ್ಷೆಯನ್ನು ಸಹಿಸಿಕೊಳ್ಳಬೇಕು. ದೇವರು ನಿಮ್ಮನ್ನು ಮಕ್ಕಳಂತೆ ನೋಡಿಕೊಳ್ಳುತ್ತಾರೆ. ತಂದೆಯಿಂದ ಶಿಕ್ಷೆಯನ್ನು ಪಡೆಯದ ಮಗನಿದ್ದಾನೆಯೇ? [8]ದೇವರು ಎಲ್ಲಾ ಮಕ್ಕಳನ್ನು ಶಿಕ್ಷಿಸುವಾಗ, ನೀವು ಮಾತ್ರ ಅದಕ್ಕೆ ಹೊರತಾದರೆ ನೀವು ತಂದೆಗೆ ಹುಟ್ಟಿದವರಲ್ಲ, ಹಾದರಕ್ಕೆ ಹುಟ್ಟಿದವರು. [9]ಲೌಕಿಕ ತಂದೆ ನಮ್ಮನ್ನು ಶಿಕ್ಷಿಸಿದಾಗಲೂ ನಾವು ಅವರನ್ನು ಗೌರವಿಸುತ್ತೇವೆ. ಹೀಗಿರುವಲ್ಲಿ, ಪಾರಮಾರ್ಥಿಕ ತಂದೆಯಾದ ದೇವರಿಗೆ ನಾವು ಎಷ್ಟೋ ವಿಧೇಯರಾಗಿ ಬಾಳಬೇಕಲ್ಲವೇ? [10]ಲೌಕಿಕ ತಂದೆಯಾದವರು ತಮ್ಮ ಮನಸ್ಸಿಗೆ ಸರಿದೋರಿದಂತೆ ನಮ್ಮನ್ನು ಶಿಕ್ಷಿಸುತ್ತಾರೆ. ಅದು ಕೊಂಚಕಾಲಕ್ಕೆ ಮಾತ್ರ ಪರಿಣಾಮಕರವಾಗಿರುತ್ತದೆ. ದೇವರಾದರೋ ನಾವು ಅವರ ಪರಿಶುದ್ಧತೆಯಲ್ಲೇ ಭಾಗಿಗಳಾಗುವಂತೆ ನಮ್ಮ ಹಿತಕ್ಕೋಸ್ಕರ ಶಿಕ್ಷಿಸುತ್ತಾರೆ. [11]ಯಾವ ಶಿಕ್ಷೆಯಾದರೂ ತಕ್ಷಣಕ್ಕೆ ಸಿಹಿಯಾಗಿರದೆ ಕಹಿಯಾಗಿಯೇ ಇರುತ್ತದೆ. ಹೀಗೆ ಶಿಸ್ತಿನ ಕ್ರಮಕ್ಕೆ ಒಳಗಾದವರು ಮುಂದಕ್ಕೆ ನ್ಯಾಯನೀತಿಯನ್ನೂ ಶಾಂತಿಸಮಾಧಾವನ್ನೂ ಪ್ರತಿಫಲವಾಗಿ ಪಡೆಯುತ್ತಾರೆ.

## ದೇವರ ಧ್ವನಿಯನ್ನು ಕಡೆಗಣಿಸದಿರಿ

12 ಆದ್ದರಿಂದ, ಜೋತುಬೀಳುವ ನಿಮ್ಮ ಕೈಗಳನ್ನು ಮೇಲೆತ್ತಿ, ಕುಸಿದುಬೀಳುವ ನಿಮ್ಮ ಮೊಣಕಾಲುಗಳನ್ನು ಚೇತರಿಸಿಕೊಳ್ಳಿ. [13]ನೀವು ಹಿಡಿದಿರುವ ಹಾದಿಯನ್ನು ಸರಿಪಡಿಸಿಕೊಳ್ಳಿ. ಆಗ ಕುಂಟುವ ಕಾಲು ಉಳುಕದೆ ವಾಸಿಯಾಗುತ್ತದೆ.

14 ಎಲ್ಲರೊಂದಿಗೂ ಶಾಂತಿಸಮಾಧಾನದಿಂದಿರಲು ಪ್ರಯತ್ನಿಸಿರಿ; ಪರಿಶುದ್ಧತೆಯನ್ನು ಅರಸಿರಿ; ಪರಿಶುದ್ಧತೆಯಿಲ್ಲದೆ ಯಾರೂ ದೇವರನ್ನು ಕಾಣುವಂತಿಲ್ಲ. [15]ನಿಮ್ಮಲ್ಲಿ ಯಾರೂ ದೇವರ ಅನುಗ್ರಹವನ್ನು ಕಳೆದುಕೊಳ್ಳದಂತೆ ಎಚ್ಚರಿಕೆಯಾಗಿರಿ. ಯಾವ ವಿಷದ ಬೇರೂ ನಿಮ್ಮಲ್ಲಿ ತಲೆದೋರಿ, ಅಸಮಾಧಾನವನ್ನು ಹುಟ್ಟಿಸಿ, ಸಭೆಯನ್ನು ಕೆಡಿಸದಂತೆ ನೋಡಿಕೊಳ್ಳಿ. [16]ನಿಮ್ಮಲ್ಲಿ ಯಾರೂ ಕಾಮುಕರಾಗಬಾರದು. ಏಸಾವನಂತೆ ಅಧರ್ಮಿಗಳು ಆಗಬಾರದು. ಆತನು, ಒಪ್ಪೊತ್ತಿನ ಊಟಕ್ಕಾಗಿ ತನ್ನ ಜನ್ಮಸಿದ್ಧವಾದ ಹಕ್ಕನ್ನೇ ಮಾರಿಕೊಂಡನು. [17]ಅನಂತರ ತಂದೆಯ ಆಶೀರ್ವಾದವನ್ನು ಬಾಧ್ಯವಾಗಿ ಪಡೆಯಲು ಕಣ್ಣೀರಿಟ್ಟು ಕೇಳಿಕೊಂಡರೂ ಪ್ರಯೋಜನವಾಗಲಿಲ್ಲ; ತಂದೆಯ ತೀರ್ಮಾನವನ್ನು ಮಾರ್ಪಡಿಸುವ ಸಾಧ್ಯತೆಯೂ ಇರಲಿಲ್ಲ. ಇದು ನಿಮಗೆ ತಿಳಿದ ವಿಷಯ.

18 ನೀವು ಇಸ್ರಯೇಲರಂತೆ ಮುಟ್ಟಬಹುದಾದ ಸೀನಾಯ್ ಬೆಟ್ಟಕ್ಕೆ ಬಂದಿಲ್ಲ. ಅಲ್ಲಿ ಬೆಂಕಿ ಧಗಧಗಿಸುತ್ತಿತ್ತು. ಕಾರ್ಗತ್ತಲು ಕವಿದಿತ್ತು; ಮೋಡದ ಮಬ್ಬು ಮುಸುಕಿತ್ತು; ಬಿರುಗಾಳಿ ಬೀಸುತ್ತಿತ್ತು. [19]ಕಹಳೆಗಳು ಮೊಳಗುತ್ತಿದ್ದವು. ಆಗ ಧ್ವನಿಯೊಂದು ಕೇಳಿಬಂತು. ಅದನ್ನು ಕೇಳಿದವರು, ಇನ್ನೆಂದಿಗೂ ಆ ಧ್ವನಿ ತಮ್ಮೊಂದಿಗೆ ಮಾತನಾಡುವುದೇ ಬೇಡವೆಂದು ಕೇಳಿಕೊಂಡರು. [20]ಏಕೆಂದರೆ, ಈ ಬೆಟ್ಟವನ್ನು ಮುಟ್ಟುವ ಯಾರೇ ಆಗಲಿ, ಯಾವ ಪ್ರಾಣಿಯೇ ಆಗಲಿ, ಅದನ್ನು ಕಲ್ಲೆಸೆದು ಕೊಲ್ಲಬೇಕು, ಎಂಬ ಆಜ್ಞೆಯನ್ನು ಅವರು

ಸಹಿಸಲಾರದೆ ಹೋದರು. 21ಆ ನೋಟ ಎಷ್ಟು ಭಯಂಕರವಾಗಿತ್ತೆಂದರೆ, ಮೋಶೆ ಕೂಡ, "ನಾನು
ಭಯದಿಂದ ನಡುಗುತ್ತಿದ್ದೇನೆ," ಎಂದು ಹೇಳುವಂತಾಯಿತು !

22 ಆದರೆ ನೀವು ಬಂದಿರುವುದು ಸಿಯೋನ್ ಬೆಟ್ಟಕ್ಕೆ, ಜೀವಂತ ದೇವರ ನಗರಕ್ಕೆ; ಸ್ವರ್ಗೀಯ
ಜೆರುಸಲೇಮಿಗೆ; ಅಸಂಖ್ಯ ದೇವದೂತರು ಕೂಡಿರುವ ಉತ್ಸವ ಕೂಟಕ್ಕೆ; 23ಸ್ವರ್ಗದಲ್ಲಿ ದಾಖಲೆಯಾಗಿರುವ
ಜ್ಯೇಷ್ಠಪುತ್ರನ ಸಭೆಗೆ; ನೀವು ಬಂದಿರುವುದು ಸಕಲ ಮಾನವರ ನ್ಯಾಯ ಮೂರ್ತಿಯಾದ ದೇವರ ಸನ್ನಿಧಿಗೆ;
ಸಿದ್ಧಿಗೆ ಬಂದ ಸತ್ಪುರುಷರ ಆತ್ಮಗಳ ಸಮೂಹಕ್ಕೆ; 24ಹೊಸ ಒಡಂಬಡಿಕೆಯ ಮಧ್ಯಸ್ಥರಾದ
ಯೇಸುಸ್ವಾಮಿಯ ಬಳಿಗೆ, ಹೇಬೆಲನ ರಕ್ತಕ್ಕಿಂತಲೂ ಅಮೋಘವಾಗಿ ಮೊರೆಯಿಡುವ ಪ್ರೋಕ್ಷಣಾ ರಕ್ತದ
ಬಳಿಗೆ ನೀವು ಬಂದಿದ್ದೀರಿ.

25 ಆದ್ದರಿಂದ ನಿಮ್ಮೊಡನೆ ಮಾತಾಡುವ ದೇವರ ಧ್ವನಿಯನ್ನು ಕಡೆಗಣಿಸಬೇಡಿ. ಭೂಮಿಯ ಮೇಲೆ
ತಮಗೆ ಬುದ್ಧಿವಾದ ಹೇಳಿದವರನ್ನು ಕಡೆಗಣಿಸಿದವರು ದಂಡನೆಯಿಂದ ತಪ್ಪಿಸಿಕೊಳ್ಳಲಿಲ್ಲ. ಹೀಗಿರುವಲ್ಲಿ
ನಮಗೆ ಸ್ವರ್ಗಲೋಕದಿಂದ ಬುದ್ಧಿವಾದ ಹೇಳಿದಾತನನ್ನು ಕಡೆಗಣಿಸಿದರೆ ಹೇಗೆತಾನೆ ದಂಡನೆಯಿಂದ
ತಪ್ಪಿಸಿಕೊಂಡೇವು? 26ಅಂದು ದೇವರ ಧ್ವನಿಗೆ ಭೂಮಿಯು ನಡುಗಿತು. ಇಂದಾದರೋ, "ಇನ್ನೂ ಒಂದು
ಸಾರಿ ನಾನು ಭೂಮಿಯನ್ನಷ್ಟೇ ಅಲ್ಲ, ಆಕಾಶವನ್ನೂ ನಡುಗಿಸುತ್ತೇನೆ," ಎಂದು ಪ್ರತಿಜ್ಞೆ ಮಾಡಿರುತ್ತಾರೆ.
27"ಇನ್ನೂ ಒಂದು ಸಾರಿ," ಎಂಬ ಈ ಮಾತು ಸೃಷ್ಟಿಸಲಾದ ವಸ್ತುಗಳನ್ನು ಕದಲಿಸಿ ಕಿತ್ತುಹಾಕಲಾಗುವುದು
ಎಂಬುದನ್ನು ಸೂಚಿಸುತ್ತದೆ. ಆಗ, ಕದಲಿಸಲಾಗದ ವಸ್ತುಗಳೆಲ್ಲಾ ಸ್ಥಿರವಾಗಿ ಉಳಿಯುತ್ತವೆ.

28 ಆದ್ದರಿಂದ ಯಾರಿಂದಲೂ ಕದಲಿಸಲಾಗದ ಸಾಮ್ರಾಜ್ಯವನ್ನು ಪಡೆದಿರುವ ನಾವು ದೇವರಿಗೆ
ಕೃತಜ್ಞತೆಯನ್ನು ಸಲ್ಲಿಸೋಣ. ಅವರಿಗೆ ಚಿರಋಣಿಗಳಾಗಿದ್ದು, ಭಯಭಕ್ತಿಯಿಂದ ಸಮರ್ಪಕ ಆರಾಧನೆಯನ್ನು
ಸಲ್ಲಿಸೋಣ. 29ಏಕೆಂದರೆ, ನಮ್ಮ ದೇವರು ಸಹಿಸುವ ಅಗ್ನಿ.

### ಸೂಕ್ತ ತಿಳುವಳಿಕೆ

**13** ಸೋದರ ಪ್ರೀತಿಯಲ್ಲಿ ನೆಲೆಯಾಗಿ ನಿಲ್ಲಿರಿ. 2ಅತಿಥಿಸತ್ಕಾರ ಮಾಡುವುದನ್ನು ಮರೆಯದಿರಿ. ಅದನ್ನು
ಮಾಡುವಾಗ ಅರಿಯದೆ ಕೆಲವರು ದೇವದೂತರನ್ನೇ ಉಪಚರಿಸಿದ್ದಾರೆ. 3ಸೆರೆಯಲ್ಲಿರುವವರನ್ನು
ಸ್ಮರಿಸಿಕೊಳ್ಳಿ. ಅವರ ಸಂಗಡ ನೀವೂ ಸೆರೆಯಲ್ಲಿರುವಂತೆ ಭಾವಿಸಿಕೊಳ್ಳಿ. ಅನ್ಯಾಯಕ್ಕೆ ಒಳಗಾಗಿರುವವರನ್ನು
ಜ್ಞಾಪಕದಲ್ಲಿಟ್ಟುಕೊಳ್ಳಿ. ಅನ್ಯಾಯಕ್ಕೆ ಒಳಗಾಗಬಲ್ಲ ದೇಹವೊಂದು ನಿಮಗೂ ಸಹ ಇದೆಯಲ್ಲವೇ?

4 ವಿವಾಹಬಂಧನವನ್ನು ಎಲ್ಲರೂ ಗೌರವಿಸಲಿ; ದಂಪತಿಗಳ ಸಂಬಂಧವು ನಿಷ್ಕಳಂಕವಾಗಿರಲಿ.
ಕಾಮುಕರೂ ವ್ಯಭಿಚಾರಿಗಳೂ ದೇವರ ನ್ಯಾಯತೀರ್ಪಿಗೆ ಗುರಿಯಾಗುತ್ತಾರೆ.

5 ಹಣದಾಶೆಗೆ ಬಲಿಯಾಗಬೇಡಿ. ನಿಮಗೆ ಇರುವುದರಲ್ಲಿಯೇ ತೃಪ್ತರಾಗಿರಿ. "ಎಂದೆಂದಿಗೂ ನಾನು
ನಿನ್ನ ಕೈಬಿಡಲಾರೆ; ತ್ಯಜಿಸಲಾರೆ," ಎಂದು ದೇವರೇ ಹೇಳಿದ್ದಾರೆ. 6ಆದ್ದರಿಂದ, "ಸರ್ವೇಶ್ವರ ನನಗೆ
ಸಹಾಯಕ, ನಾನು ಭಯಪಡೆನು; ಮಾನವನು ನನಗೇನು ಮಾಡಬಲ್ಲನು?" ಎಂದು ನಾವು ಧೈರ್ಯದಿಂದ
ಹೇಳಲು ಸಾಧ್ಯ.

7 ದೇವರ ವಾಕ್ಯವನ್ನು ನಿಮಗೆ ಹೇಳಿಕೊಟ್ಟ ಹಿಂದಿನ ಸಭಾನಾಯಕರನ್ನು ಮರೆಯಬೇಡಿ. ಅವರು
ಹೇಗೆ ಬಾಳಿದರು, ಎಂಥ ಮರಣವನ್ನು ಪಡೆದರು ಎಂಬುದನ್ನು ಕುರಿತು ಆಲೋಚಿಸಿರಿ. ಅವರ ವಿಶ್ವಾಸ
ನಿಮಗೆ ಆದರ್ಶವಾಗಿರಲಿ. 8ಯೇಸುಕ್ರಿಸ್ತರು, ನಿನ್ನೆ ಇದ್ದ ಹಾಗೆಯೇ ಇಂದೂ ಎಂದೆಂದೂ ಇದ್ದಾರೆ.
9ನಾನಾವಿಧವಾದ ವಿಚಿತ್ರ ಬೋಧನೆಗಳ ಸೆಳೆತಕ್ಕೆ ಸಿಲುಕದಿರಿ. ನಿಮ್ಮ ಹೃದಯವನ್ನು, ಊಟೋಪಚಾರಗಳನ್ನು
ಕುರಿತ ವಿಧಿನಿಯಮಗಳಿಂದ ಅಲ್ಲ, ದೇವರ ವರಪ್ರಸಾದದಿಂದ ದೃಢಪಡಿಸಿಕೊಳ್ಳಿ. ಅಂಥ ವಿಧಿನಿಯಮಗಳಿಗೆ
ಬದ್ಧರಾಗಿದ್ದವರು ಯಾವ ಪ್ರಯೋಜನವನ್ನೂ ಪಡೆಯಲಿಲ್ಲ.

10 ನಮಗೊಂದು ಬಲಿಪೀಠವಿದೆ; ಅಲ್ಲಿ ಅರ್ಪಿಸಲಾಗುವ ಬಲಿಯನ್ನು ಭುಜಿಸಲು ಯೆಹೂದ್ಯ
ಗುಡಾರಗಳಲ್ಲಿ ಸೇವೆಸಲ್ಲಿಸುವ ಯಾಜಕರಿಗೆ ಹಕ್ಕಿಲ್ಲ. 11ಪ್ರಧಾನ ಯಾಜಕನು ಪಾಪಪರಿಹಾರಕಬಲಿಗಾಗಿ

ಯಾವ ಪ್ರಾಣಿಗಳ ರಕ್ತವನ್ನು ಗರ್ಭಗುಡಿಗೆ ತರುತ್ತಾನೋ ಆ ಪ್ರಾಣಿಗಳ ದೇಹವನ್ನು ಪಾಳೆಯದಾಚೆ
ಸುಡುವುದುಂಟು. [12]ಯೇಸುಸ್ವಾಮಿ ಕೂಡ ತಮ್ಮ ರಕ್ತದಿಂದ ಜನರನ್ನು ಪರಿಶುದ್ಧಗೊಳಿಸುವುದಕ್ಕೋಸ್ಕರ,
ನಗರ ದ್ವಾರದ ಹೊರಗಡೆ ಮರಣಕ್ಕೆ ಈಡಾದರು. [13]ಅಂತೆಯೇ ನಾವು ಅವರ ನಿಮಿತ್ತ ನಮಗೆ ಬರುವ
ನಿಂದೆ ಅವಮಾನಗಳನ್ನು ಹೊತ್ತು ನಮ್ಮ ಪಾಳೆಯದಿಂದಾಚೆ ಅವರ ಬಳಿಗೆ ಹೋಗೋಣ. [14]ಏಕೆಂದರೆ,
ಇಹದಲ್ಲಿ ಶಾಶ್ವತವಾದ ನಗರವು ನಮಗಿಲ್ಲ. ಬರಲಿರುವ ನಗರವನ್ನು ನಾವು ಎದುರುನೋಡುವವರು.
[15]ಆದ್ದರಿಂದ, ಪ್ರಭುವಾದ ಯೇಸುಕ್ರಿಸ್ತರನ್ನು ಮುಕ್ತ ಕಂಠದಿಂದ ಗುಣಗಾನ ಮಾಡುತ್ತಾ ಅವರ ಮುಖಾಂತರ
ಸ್ತುತಿಯೆಂಬ ಬಲಿಯನ್ನು ದೇವರಿಗೆ ಸತತವಾಗಿ ಸಮರ್ಪಿಸೋಣ. [16]ಇದಲ್ಲದೆ, ಪರೋಪಕಾರ
ಮಾಡುವುದನ್ನೂ ನಿಮಗಿರುವುದನ್ನು ಪರರೊಡನೆ ಹಂಚಿಕೊಳ್ಳುವುದನ್ನೂ ನಿಲ್ಲಿಸಬೇಡಿ. ಇವು ಕೂಡ
ದೇವರಿಗೆ ಮೆಚ್ಚುಗೆಯಾದ ಬಲಿಯರ್ಪಣೆಗಳೇ.

17 ನಿಮ್ಮ ಸಭಾನಾಯಕರಿಗೆ ವಿಧೇಯರಾಗಿರಿ. ಅವರ ಆಜ್ಞೆಗಳನ್ನು ಪಾಲಿಸಿರಿ. ಅವರು ನಿಮ್ಮ
ಆತ್ಮಗಳ ಪಾಲಕರು; ದೇವರಿಗೆ ಲೆಕ್ಕ ಒಪ್ಪಿಸಬೇಕಾದವರು. ಈ ಸೇವೆಯನ್ನು ಅವರು ಸಂತೋಷದಿಂದ
ಮಾಡುವಂತೆ ನೀವು ನಡೆದುಕೊಳ್ಳಿ. ಅವರು ಮನನೊಂದುಕೊಂಡು ಮಾಡುವ ಸೇವೆಯಿಂದ ನಿಮಗೆ
ಒಳಿತಾಗದು.

18 ನಮಗಾಗಿಯೂ ಪ್ರಾರ್ಥಿಸಿರಿ. ಎಲ್ಲಾ ವಿಷಯಗಳಲ್ಲಿ ನಾವು ಸಜ್ಜನರಾಗಿ
ನಡೆದುಕೊಳ್ಳಬೇಕೆಂಬುದೇ ನಮ್ಮ ಅಪೇಕ್ಷೆ. ನಮ್ಮ ಮನಸ್ಸಾಕ್ಷಿ ಶುದ್ಧವಾಗಿದೆಯೆಂಬ ದೃಢನಂಬಿಕೆ ನಮಗಿದೆ.
[19]ನಿಮ್ಮ ಬಳಿಗೆ ನಾನು ಆದಷ್ಟು ಬೇಗನೆ ಬಂದು ಸೇರುವಂತೆ ಪ್ರಾರ್ಥಿಸಬೇಕೆಂದು ನಿಮ್ಮನ್ನು ಬಹಳವಾಗಿ
ಕೇಳಿಕೊಳ್ಳುತ್ತೇನೆ.

**ಆಶೀರ್ವಚನ**

20 ಸಭೆಯೆಂಬ ಕುರಿಮಂದೆಗೆ ಮಹಾಪಾಲಕರಾದ ಯೇಸುಸ್ವಾಮಿ ಶಾಶ್ವತ ಒಡಂಬಡಿಕೆಯನ್ನು
ನಿಶ್ಚಯಪಡಿಸುವುದಕ್ಕಾಗಿ ತಮ್ಮ ರಕ್ತವನ್ನು ಸುರಿಸಿದರು. ಶಾಂತಿದಾತರಾದ ದೇವರು ನಮ್ಮ ಪ್ರಭುವನ್ನು
ಸಾವಿನಿಂದ ಜೀವಕ್ಕೆ ಎಬ್ಬಿಸಿದರು. [21]ನೀವು ಇಂಥ ದೇವರ ಚಿತ್ತವನ್ನು ನೆರವೇರಿಸಲು ನಿಮಗೆ ಬೇಕಾದ
ಎಲ್ಲಾ ವರದಾನಗಳನ್ನು ಅವರು ನಿಮಗೆ ಅನುಗ್ರಹಿಸಲಿ. ಸ್ವಾಮಿ ಯೇಸುಕ್ರಿಸ್ತರ ಮುಖಾಂತರ ನಾವು ಅವರಿಗೆ
ಪ್ರಿಯರಾದವರಾಗಿ ಬಾಳುವಂತಾಗಲಿ. ಯೇಸುಕ್ರಿಸ್ತರಿಗೆ ಯುಗಯುಗಾಂತರಕ್ಕೂ ಮಹಿಮೆ ಸಲ್ಲಲಿ ! ಆಮೆನ್.

22 ಸಹೋದರರೇ, ಈ ಬುದ್ಧಿಮಾತುಗಳನ್ನು ತಾಳ್ಮೆಯಿಂದ ಸ್ವೀಕರಿಸಬೇಕೆಂದು ಕೇಳಿಕೊಳ್ಳುತ್ತೇನೆ.
ಇವನ್ನು ಸಂಕ್ಷೇಪವಾಗಿಯೇ ನಿಮಗೆ ಬರೆದಿದ್ದೇನೆ. [23]ನಿಮ್ಮ ಸಹೋದರ ತಿಮೊಥೇಯನಿಗೆ
ಬಿಡುಗಡೆಯಾಗಿದೆ ಎಂದು ನಿಮಗೆ ತಿಳಿಸಬಯಸುತ್ತೇನೆ. ಆತನು ಬೇಗ ಬಂದರೆ, ನಾನೂ ಆತನೊಂದಿಗೆ
ಬಂದು ನಿಮ್ಮನ್ನು ಕಾಣುತ್ತೇನೆ.

24 ನಿಮ್ಮ ಸಭಾನಾಯಕರೆಲ್ಲರಿಗೂ ಎಲ್ಲಾ ದೇವಜನರಿಗೂ ನನ್ನ ವಂದನೆಗಳು. ಇಟಲಿಯಿಂದ
ಬಂದ ಸಹೋದರರು ನಿಮಗೆ ವಂದನೆ ತಿಳಿಸಿದ್ದಾರೆ.

25 ದೇವರ ಕೃಪಾಶೀರ್ವಾದ ನಿಮ್ಮೆಲ್ಲರಲ್ಲೂ ಇರಲಿ !